# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 182 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–02–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 182 | Title- Code: KARKAN 28269 | Chitradurga | Date: 02-02-2024 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಫೆ.02 ರಿಂದ 04 ರವರೆಗೆ ಫಲ–ಪುಷ್ಪ ಪ್ರದರ್ಶನ 2

ಜನರಕಲ್ಯಾಣಕ್ಕಾಗಿ ದೇವಿಯಲ್ಲಿ ಪ್ರಾರ್ಥನೆ: ಶಾಸಕ ಟಿ.ರಘುಮೂರ್ತಿ 3

ರಘು, ಸವಿತಾರವರನ್ನು ಕಾಂಗ್ರೆಸ್ ಪಕ್ಷದಿಂದ ಉಚ್ಚಾಟಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಕೇಂದ್ರ ಮಧ್ಯಂತರ ಬಜೆಟ್‌ನಲ್ಲಿ ಘೋಷಣೆ– ಮೋದಿ ಹರ್ಷ

# ಬಜೆಟ್ ಯುವ ಭಾರತ ಪ್ರತಿಫಲಿಸಿದೆ



» **ಹೊಸದಿಲ್ಲಿ**

ಲೋಕಸಭಾ ಚುನಾವಣೆಗೂ ಮುನ್ನ ಮಂಡಿಸಲಾಗಿರುವ ಮಧ್ಯಂತರ ಬಜೆಟ್ ಅನ್ನು ಪ್ರಶಂಸಿಸಿರುವ ಪ್ರಧಾನಿ ನರೇಂದ್ರ ಮೋದಿ, ಬಂಡವಾಳ ವೆಚ್ಚವು ದಾಖಲೆಯ ರೂ. 11,11,111 ಕೋಟಿಗೆ ಏರಿಕೆಯಾಗಲಿದ್ದು, ವಿತ್ತೀಯ ಕೊರತೆಯನ್ನು ನಿಯಂತ್ರಿಸಿ, 'ಸಿಹಿ ತಾಣ□ಕ್ಕೆ ತಲುಪಿಸಿದೆ ಎಂದು ಬಣ್ಣಿಸಿದ್ದಾರೆ ಎಂದು ಟಿಜಣಠ.ಛಿಟಠ ವರದಿ ಮಾಡಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ 2024ರ ಬಜೆಟ್ ಭಾಷಣವನ್ನು ಮುಕ್ತಾಯಗೊಳಿಸಿದ ನಂತರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬಜೆಟ್ ನಿರ್ಧಾರಗಳು ಕೇವಲ ಮುಂದುವರಿದ 21ನೇ ಶತಮಾನದ ಮೂಲಸೌಕರ್ಯಗಳ ಅಭಿವೃದ್ಧಿಗೆ ನಿಧಿ ಮಾತ್ರ ಒದಗಿಸದೆ, ಅಗಣಿತ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿವೆ ಎಂದು ಶ್ಲಾಘಿಸಿದರು.

ಬಜೆಟ್ ಯುವಕರ ಯುವ ಭಾರತವನ್ನು ಪ್ರತಿಫಲಿಸಿದೆ ಎಂದು ಪ್ರತಿಪಾದಿಸಿದ ಅವರು, ಈ ದಿಕ್ಕಿನಲ್ಲಿ ಸಂಶೋಧನೆ ಮತ್ತು ಆವಿಷ್ಕಾರಕ್ಕೆ ರೂ. ಒಂದು ಲಕ್ಷ ಕೋಟಿ ನಿಧಿ ಹಾಗೂ ನವೋದ್ಯಮಗಳಿಗೆ ತೆರಿಗೆ ವಿನಾಯಿತಿಯನ್ನು ಹೆಚ್ಚಿಸಿರುವ ಎರಡು ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

**ಕೇಂದ್ರ ಸರ್ಕಾರದ ಬಜೆಟ್ ನ ಹೈಲೆಟ್ಸ್:** * ಆಯುಷ್ಮಾನ್ ಭಾರತ್ ಆಯುಷ್ಮಾನ್ ಭಾರತ್ ಅಡಿಯಲ್ಲಿ ಎಲ್ಲಾ ಆಶಾ ಕಾರ್ಯಕರ್ತೆಯರಿಗೆ, ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಸಹಾಯಕರಿಗೆ ಆರೋಗ್ಯ ರಕ್ಷಣೆ ಸೇವೆ ವಿಸ್ತರಿಸಲಾಗುವುದು.

- **ಎಲೆಕ್ಟ್ರಿಕ್ ವಾಹನಗಳಿಗೆ ಉತ್ತೇಜನ**
- **ಕಿಸಾನ್ ಸಂಪದ ಯೋಜನೆಯಿಂದ 38 ಲಕ್ಷ ರೈತರಿಗೆ ಲಾಭವಾಗಿದೆ. ದೇಶದಲ್ಲಿ ಹಾಲು ಉತ್ಪಾದನಾ ಡೇರಿಗಳ ಸಂಖ್ಯೆ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ನಮ್ಮ ಸರ್ಕಾರ ಪ್ರತ್ಯೇಕ ಮತ್ಸ ಸಂಪದ ಯೋಜನೆ ಜಾರಿಗೊಳಿಸಿದೆ. ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆ ವಿಸ್ತರಿಸಲಾಗುವುದು.**
- **ಲಕ್ಷದ್ವೀಪದಲ್ಲಿ ಪ್ರವಾಸೋದ್ಯಮ ಮೂಲಸೌಕರ್ಯಕ್ಕೆ ಸರ್ಕಾರ ಹಣ ವ್ಯವಸ್ಥೆ ಮಾಡಲಿದೆ, ಪ್ರವಾಸೋದ್ಯಮಕ್ಕೆ ರಾಜ್ಯಗಳಿಗೆ ಬಡ್ಡಿ ರಹಿತ ಸಾಲ ನೀಡಲಾಗುವುದು ಎಂದು ನಿರ್ಮಲಾ ಸೀತಾರಾಮನ್ ಅವರು ಬಜೆಟ್ ನಲ್ಲಿ ಘೋಷಣೆ ಮಾಡಿದ್ದಾರೆ.**
- **ಸಣ್ಣ ನಗರಗಳಿಗೂ ಮೆಟ್ರೋ ವಿಸ್ತರಣೆ- 40 ಸಾವಿರ ರೈಲ್ವೆ ಕೋಚ್ ಬದಲಾವಣೆಗೆ ಕ್ರಮ ಕೈಗೊಂಡಿದ್ದೇವೆ, ಮೆಟ್ರೋ, ವಂದೇ ಭಾರತ್ ರೈಲಿಗೆ ಹೆಚ್ಚಿನ ಒತ್ತು.**
- **ದೇಶದಲ್ಲಿ ಹಾಲು ಉತ್ಪಾದನಾ ಡೇರಿಗಳ ಸಂಖ್ಯೆ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ನಮ್ಮ ಸರ್ಕಾರ ಪ್ರತ್ಯೇಕ ಮತ್ಸ ಸಂಪದ ಯೋಜನೆ ಜಾರಿಗೊಳಿಸಿದೆ.**
- **2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡುತ್ತೇವೆ. -ಸ್ಕಿಲ್ ಇಂಡಿಯಾ ಮಿಷನ್ 1.4 ಕೋಟಿ ಯುವಕರಿಗೆ ತರಬೇತಿ ನೀಡಿದೆ, 54 ಲಕ್ಷ ಯುವಕರಿಗೆ ತರಬೇತಿ ನೀಡಿದೆ ಮತ್ತು 3000 ಹೊಸ ಐಟಿಐಗಳನ್ನು ಸ್ಥಾಪಿಸಿದೆ.**
- **ಬಾಡಿಗೆ ಮನೆಗಳು, ಕೊಳೆಗೇರಿಗಳಲ್ಲಿ ವಾಸಿಸುವ ಜನರಿಗೆ ಹೊಸ ಮನೆಯನ್ನು ಖರೀದಿಸಲು ಪ್ರಧಾನಮಂತ್ರಿ ಆವಾಸ್ ಯೋಜನೆ ಅಡಿ ನೆರವು ನೀಡಲಾಗುತ್ತದೆ.**
- **ಮೀನುಗಾರಿಕೆ ಯೋಜನೆಯನ್ನು ಉತ್ತೇಜಿಸಲು ಸರ್ಕಾರ ಕೆಲಸ ಮಾಡುತ್ತದೆ, ಸರ್ಕಾರ 5 ಇಂಟಿಗ್ರೇಟೆಡ್ ಆಕ್ವಾ ಪಾರ್ಕ್‌ಗಳನ್ನು ತೆರೆಯಲಿದೆ.**
- **ದೇಶದಲ್ಲಿ ಹೆಚ್ಚಿನ ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಒತ್ತು ನೀಡಲಾಗುವುದು, ಅಂಗನವಾಡಿ ಕೇಂದ್ರವನ್ನು ಮೇಲ್ದರ್ಜೆಗೇರಿಸಲಾಗುವುದು.**
- **ಸರ್ಕಾರದ ಗಮನವು ಜಿಡಿಪಿ ಮೇಲೆ ಇದೆ ಎಂದು ಹಣಕಾಸು ಸಚಿವೆ ಸೀತಾರಾಮನ್ ಹೇಳಿದರು. ಸರ್ಕಾರವು ಆಡಳಿತ, ಅಭಿವೃದ್ಧಿ ಮತ್ತು ಕಾರ್ಯಕ್ಷಮತೆಯ ಮೇಲೆ ಸಮಾನವಾಗಿ ಗಮನಹರಿಸುತ್ತಿದೆ ಎಂದರು.**
- **ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆ ವಿಸ್ತರಿಸಲಾಗುವುದು. ಜೈಜವಾನ್, ಜೈಕಿಸಾನ್, ಜೈವಿಜ್ಞಾನ, ಜೈ ಅನುಸಂಧಾನ ಎಂಬ ಪ್ರಧಾನಿ ಮೋದಿ ಅವರ ಘೋಷಣೆಯಡಿ ಕಾರ್ಯನಿರ್ವಹಿಸುತ್ತೇವೆ.**
- **ಪ್ರವಾಸೋದ್ಯಮಕ್ಕೆ ರಾಜ್ಯಗಳಿಗೆ ಬಡ್ಡಿ ರಹಿತ ಸಾಲ .ಆದಾಯ ತೆರಿಗೆ ಸ್ಲ್ಯಾಬ್‌ನಲ್ಲಿ ಯಾವುದೇ ಬದಲಾವಣೆ ಇಲ್ಲ. -ಕಳೆದ 10 ವರ್ಷಗಳಲ್ಲಿ ನೇರ ತೆರಿಗೆ ಪ್ರಮಾಣದಲ್ಲಿ ಶೇ.3 ರಷ್ಟು ಹೆಚ್ಚಳವಾಗಿದೆ.**
- **ಈ ಬಾರಿ ನಿರ್ಮಲಾ ಸೀತಾರಾಮನ್ ಕೇವಲ 1 ಗಂಟೆಗಳ ಕಾಲ ಬಜೆಟ್ ಮಂಡಿಸಿರುವುದು ಆಶ್ಚರ್ಯ ಮೂಡಿಸಿದೆ. 2022ರಲ್ಲಿ 92 ನಿಮಿಷಗಳ ಬಜೆಟ್ ಮಂಡಿಸಿದ್ದರು.**

| | | | |
|---|---|---|---|
| ರಕ್ಷಣಾ ಸಚಿವಾಲಯ: **6.01** ಲಕ್ಷ ಕೋಟಿ ರೂ. | ರೈಲ್ವೆ ಸಚಿವಾಲಯ: **2.55** ಲಕ್ಷ ಕೋಟಿ ರೂ. | ಗ್ರಾಮೀಣಾಭಿವೃದ್ಧಿ ಸಚಿವಾಲಯ: **1.77** ಲಕ್ಷ ಕೋಟಿ ರೂ. | ಸಂವಹನ ಸಚಿವಾಲಯ: **1.37** ಲಕ್ಷ ಕೋಟಿ ರೂ. |
| ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ: **2.78** ಲಕ್ಷ ಕೋಟಿ ರೂ. | ಗೃಹ ವ್ಯವಹಾರಗಳ ಸಚಿವಾಲಯ: **2.03** ಲಕ್ಷ ಕೋಟಿ ರೂ | ರಸಗೊಬ್ಬರಗಳ ಸಚಿವಾಲಯ: **1.68** ಲಕ್ಷ ಕೋಟಿ ರೂ. | ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ: **1.27** ಲಕ್ಷ ಕೋಟಿ ರೂ. |




## ಕ್ಷೇತ್ರವಾರು ಅನುದಾನ ಹಂಚಿಕೆ ವಿವರ

ಭಾರತದ ಬಂಡವಾಳ ವಿನಿಯೋಗವು ಹಣಕಾಸು ವರ್ಷ 2024–25ಕ್ಕೆ ಶೇಕಡ 11 ರಷ್ಟು ಹೆಚ್ಚಾಗಿ 11.11 ಲಕ್ಷ ಕೋಟಿ ರೂಪಾಯಿಗೆ ತಲುಪಿದೆ ಎಂದು ಕೂಡಾ ಸಚಿವರು ಹೇಳಿದ್ದಾರೆ. ಹಾಗೆಯೇ ಭಾರತದಲ್ಲಿ ಹೊಸದಾಗಿ 1000 ಏರ್‌ಕ್ರಾಫ್ಟ್‌ಗಳನ್ನು ಆರ್ಡರ್ ಮಾಡಲಾಗಿದೆ ಎಂದು ಕೂಡಾ ತಿಳಿಸಿದ್ದಾರೆ. ರಕ್ಷಣಾ ಕ್ಷೇತ್ರವನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಹೊಸ ಯೋಜನೆಗಳನ್ನು ಜಾರಿ ಮಾಡಲಾಗುವುದು ಎಂದ ಸೀತಾರಾಮನ್ ಕೃಷಿ ಕ್ಷೇತ್ರದಲ್ಲಿ ಖಾಸಗಿ ಮತ್ತು ಸಾರ್ವಜನಿಕ ಹೂಡಿಕೆಯನ್ನು ಸರ್ಕಾರವು ಉತ್ತೇಜಿಸುತ್ತದೆ ಎಂದು ಕೂಡಾ ಹೇಳಿದರು. ಹಾಗೆಯೇ ಪ್ರತಿ ಇಲಾಖೆಗೂ ಅನುದಾನವನ್ನು ಘೋಷಣೆ ಮಾಡಲಾಗಿದೆ. ನಾವು ಅನುದಾನವನ್ನು ಗಮನಿಸಿದಾಗ ದೇಶದ ಅತೀ ಮುಖ್ಯವಾದ ಕೃಷಿ ಕ್ಷೇತ್ರಕ್ಕೆ ಅತೀ ಕಡಿಮೆ ಅನುದಾನ ಹಂಚಿಕೆ ಮಾಡಲಾಗಿದೆ ಎಂಬುವುದು ತಿಳಿದು ಬರುತ್ತದೆ. ಇನ್ನು ರಕ್ಷಣಾ ಕ್ಷೇತ್ರಕ್ಕೆ ಅತೀ ಅಧಿಕ ಬಂಡವಾ ಹಂಚಿಕೆ ಮಾಡಲಾಗಿದೆ.

**ಕೃಷಿ:**ನಿರ್ಮಲಾಸೀತಾರಾಮನ್‌ಕೃಷಿಬಗ್ಗೆಮಾತನಾಡಿದ್ದು, ಕೊಯ್ಲಿನ ನಂತರದ ಕೃಷಿ ಚಟುವಟಿಕೆಗಳಲ್ಲಿ ಸರ್ಕಾರಿ ಹಾಗೂ ಖಾಸಗಿ ಹೂಡಿಕೆಗಳನ್ನು ಉತ್ತೇಜಿಸುವುದಾಗಿ ತಿಳಿಸಿದ್ದಾರೆ.

**ಕೇಂದ್ರ ಬಜೆಟ್:** ಹಾಲು, ಡೈರಿ ಉತ್ಪಾದನೆ ಹೆಚ್ಚಿಸುವ ಯೋಜನೆ ಪ್ರಕಟಿಸಿದ ನಿರ್ಮಲಾ ಸೀತಾರಾಮನ್ ಇನ್ನು ಈ ಬಾರಿಯ ಬಜೆಟ್ ನಲ್ಲಿ ಪಿಎಂ ಕಿಸಾನ್ ಯೋಜನೆಯ ಮೊತ್ತವನ್ನು ವರ್ಷಕ್ಕೆ 6000 ದಿಂದ 7,500–8000 ರೂಪಾಯಿಗಳಿಗೆ ಏರಿಕೆ ಮಾಡಲಾಗುತ್ತದೆ ಎಂಬ ನಿರೀಕ್ಷೆ ಇತ್ತಾದರೂ ಇದರಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ. ಪಿಎಂ ಕಿಸಾನ್ ಯೋಜನೆಯಡಿಯಲ್ಲಿ 11.8 ಕೋಟಿ ರೈತರಿಗೆ ನೆರವು ಸಿಕ್ಕಿದೆ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.





## ಮಹಿಳೆಯರಿಗೆ ನಿರ್ಮಲಾ ಭರ್ಜರಿ ಉಡುಗೊರೆ

- **ಉದ್ಯಮಶೀಲತೆ, ಸುಗಮ ಜೀವನ ಮತ್ತು ಘನತೆಯ ಮೂಲಕ ಮಹಿಳಾ ಸಬಲೀಕರಣವು ಕಳೆದ 10 ವರ್ಷಗಳಲ್ಲಿ ವೇಗವನ್ನು ಪಡೆದುಕೊಂಡಿದೆ**
- **ಮಹಿಳಾ ಉದ್ಯಮಿಗಳಿಗೆ 30 ಕೋಟಿ ಮುದ್ರಾ ಯೋಜನೆ ಸಾಲ ನೀಡಲಾಗಿದೆ**
- **ಉನ್ನತ ಶಿಕ್ಷಣದಲ್ಲಿ ಮಹಿಳಾ ದಾಖಲಾತಿ 10 ವರ್ಷಗಳಲ್ಲಿ 28% ಹೆಚ್ಚಾಗಿದೆ**
- **ಸ್ಟೆಮ್ ಕೋರ್ಸ್‌ಗಳಲ್ಲಿ, ಬಾಲಕಿಯರು ಮತ್ತು ಮಹಿಳೆಯರು ದಾಖಲಾತಿಯಲ್ಲಿ 43% ರಷ್ಟಿದ್ದಾರೆ, ಇದು ವಿಶ್ವದಲ್ಲೇ ಅತಿ ಹೆಚ್ಚು.**
- **ಇವೆಲ್ಲವೂ ಕಾರ್ಯಪಡೆಯಲ್ಲಿ ಮಹಿಳೆಯರ ಹೆಚ್ಚುತ್ತಿರುವ ಭಾಗವಹಿಸುವಿಕೆಯಲ್ಲಿ ಪ್ರತಿಬಿಂಬಿತವಾಗಿವೆ**
- **ತ್ರಿವಳಿ ತಲಾಖ್ ಅನ್ನು ಕಾನೂನು ಬಾಹಿರಗೊಳಿಸುವುದು**

## ಫಾಸ್ಟ್ ನ್ಯೂಸ್

### ಕೇಂದ್ರದ ಬಜೆಟ್ ನಿರಾಶದಾಯಕ: ಸಿಎಂ ಸಿದ್ದರಾಮಯ್ಯ



» **ಬೆಂಗಳೂರು**

ಕೇಂದ್ರದ ಬಜೆಟ್ ನಿರಾಶದಾಯಕ, ಇದು ಎಲೆಕ್ಷನ್ ಬಜೆಟ್ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.ಗೃಹಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದು ಚರ್ಚೆ ಮಾಡುವಂತಹ ಬಜೆಟ್ ಅಲ್ಲ. 47 ಲಕ್ಷದ 65 ಸಾವಿರ 768 ಕೋಟಿ ರೂ. ಗಾತ್ರ ಬಜೆಟ್ ಆಗಿದೆ.ಕಳೆದ ವರ್ಷ 45 ಲಕ್ಷದ 3 ಸಾವಿರ 97 ಕೋಟಿ 2 ಲಕ್ಷದ 66 ಸಾವಿರ ಕೋಟಿ ರೂ. ಹೆಚ್ಚು ಈಗಿನ ಮಧ್ಯಂತರ ಬಜೆಟ್ ಘೋಷಣೆ ಆಗದಿರಬಹುದು. ಅಂದರೆ ಕಳೆದ ಬಾರಿಗಿಂತ ಈ ವರ್ಷ 5.8% ಹೆಚ್ಚಳವಾಗಿದೆ ಎಂದರು.ಈ ಬಜೆಟ್ ನಿರಾಶಾದಾಯಕವಾಗಿದ್ದು, ಚುನಾವಣೆಗೋಸ್ಕರ ಮಾಡಿದ್ದಾರೆ. ಯಾವುದೇ ಹೊಸ ಅಂಶ ಇಲ್ಲ. ಬಜೆಟ್ ವಿಶ್ಲೇಷಣೆ ಮಾಡುವುದು ಕಷ್ಟ. ಬಡವರು, ರೈತರು, ಯುವಕರು ಮತ್ತು ಮಹಿಳೆಯರಿಗಾಗಿ ಈ ಬಜೆಟ್ ಅಂತಾರೆ, ಇದು ವಿನಾಶಕಾರಿ ಬಜೆಟ್ ಅಂತ ನಾನು ಹೇಳುತ್ತೇನೆ. ನಾವು ನಿಜವಾಗಿಯೂ ಬಡವರು, ರೈತರು, ಯುವಕರು ಮತ್ತು ಮಹಿಳೆಯರಿಗಾಗಿ ಕಾರ್ಯಕ್ರಮ ಕೊಟ್ಟಿದ್ದೇವೆ. ಅನ್ನಭಾಗ್ಯ, ಗೃಹಲಕ್ಷ್ಮಿ, ಯುವನಿಧಿ ಗೃಹಜ್ಯೋತಿ ಕೃಷಿಭಾಗ್ಯ ಭಾಗ್ಯಗಳನ್ನ ಕೊಟ್ಟಿದ್ದೇವೆ. ಕಳೆದ 45 ವರ್ಷಗಳಲ್ಲಿ ಬಹಳ ನಿರುದ್ಯೋಗ ಬೆಳೆದಿದೆ ಎಂದರು.

### ಬಜೆಟ್ ಸ್ವಾಗತಿಸಿದ ಮಾಜಿ ಸಿಎಂ ಎಚ್‌ಡಿಕೆ



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ ಮಧ್ಯಂತರ ಬಜೆಟ್ ಅನ್ನು ನಾನು ಸ್ವಾಗತಿಸುತ್ತೇನೆ ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ. ಈ ಬಗ್ಗೆ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು, 'ಕೃಷಿ ವಲಯ ಮತ್ತು ಕೃಷಿ ಧಾನ್ಯಗಳ ಬೆಳೆಗೆ ಉತ್ತೇಜನ, ಉದ್ಯೋಗ ಸೃಷ್ಟಿ, ಯುವ ಉದ್ಯಮಿಗಳಿಗೆ ಪ್ರೋತ್ಸಾಹ, ಉತ್ಪಾದನೆಗೆ ಒತ್ತು ಇತ್ಯಾದಿ ಕ್ರಮಗಳು ಸ್ವಾಗತಾರ್ಹ ಎಂದಿದ್ದಾರೆ.





## ಫಾಸ್ಟ್ ನ್ಯೂಸ್

### ಫೆ.3 ರಂದು ವಿವಿಧ ಮಹನೀಯರ ಜಯಂತಿ ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಜಿಲ್ಲಾ ಕೇಂದ್ರದಲ್ಲಿ ವಿವಿಧ ಮಹನೀಯರ ಜಯಂತಿ ಆಚರಣೆ ಸಂಬಂಧ ಫೆ. 03 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಗಳನ್ನು ಏರ್ಪಡಿಸಲಾಗಿದೆ.ಫೆ. 10 ರಂದು ಕಾಯಕ ಶರಣರ (ಮಾದರ ಚನ್ನಯ್ಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಹಾಗೂ ಸಮಗಾರ ಹರಳಯ್ಯ) ಜಯಂತಿ ಆಚರಣೆ ಕುರಿತಂತೆ ಫೆ. 3 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.ಫೆ.15 ರಂದು ಆಚರಿಸಲಾಗುವ ಸಂತ ಸೇವಾಲಾಲ್ ಜಯಂತಿ ಕುರಿತು ಫೆ. 03 ರಂದು ಬೆಳಿಗ್ಗೆ 11.30 ಗಂಟೆಗೆ. ಫೆ. 16 ರಂದು ಆಚರಿಸಲಾಗುವ ಸವಿತಾ ಮಹರ್ಷಿಗಳ ಜಯಂತಿ ಕುರಿತು ಫೆ. 03 ರಂದು ಮಧ್ಯಾಹ್ನ 12 ಗಂಟೆಗೆ. ಫೆ. 19 ರಂದು ಆಚರಿಸಲಾಗುವ ಶಿವಾಜಿ ಮಹಾರಾಜರ ಜಯಂತಿ ಕುರಿತು ಫೆ. 03 ರಂದು ಮಧ್ಯಾಹ್ನ 03 ಗಂಟೆಗೆ. ಫೆ. 20 ರಂದು ಆಚರಿಸಲಾಗುವ ಸಂತ ಕವಿ ಸರ್ವಜ್ಞ ಜಯಂತಿ ಕುರಿತು ಫೆ. 03 ರಂದು ಸಂಜೆ 04 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

### 2ರಂದು ತರಬೇತಿ ಕಾರ್ಯಗಾರ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ಜಿಲ್ಲೆಯ ಎಸ್.ಜೆ.ಪಿ.ಯು ಅಧಿಕಾರಿಗಳಿಗೆ ಮಕ್ಕಳ ರಕ್ಷಣಾ ಕಾಯ್ದೆಗಳು ಹಾಗೂ ಅಧಿಕಾರಿಗಳ ಪಾತ್ರ ಮತ್ತು ಕರ್ತವ್ಯಗಳ ಕುರಿತು ಒಂದು ದಿನದ ಕಾರ್ಯಗಾರವನ್ನು ಇದೇ ಫೆ.2ರಂದು ಬೆಳಗ್ಗೆ 10ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ. ತಿಪ್ಪೇಸ್ವಾಮಿ ಕಾರ್ಯಾಗಾರ ಉದ್ಘಾಟಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಘನ ಉಪಸ್ಥಿತಿ ವಹಿಸುವರು. ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಪೋಲಿಸ್ ಅಧೀಕ್ಷಕ ಧರ್ಮೇಂದ್ರ ಕುಮಾರ್ ಮೀನಾ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಆರ್. ಪ್ರಭಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಡಿ.ಕೆ. ಶೀಲಾ, ಹಾಗೂ ಜಿ.ಟಿ. ಬಸವರಾಜ್, ಬಾಲ ನ್ಯಾಯ ಮಂಡಳಿ ಸದಸ್ಯರಾದ ಸುಮನ ಎಸ್.ಅಂಗಡಿ, ಮಧುಕರ್ ಭಾಗವಹಿಸುವರು. ಮಕ್ಕಳ ಹಕ್ಕುಗಳು, ಮಿಷನ್ ವಾತ್ಸಲ್ಯ ಯೋಜನೆ ಹಾಗೂ ಮಕ್ಕಳ ನ್ಯಾಯ ಕಾಯ್ದೆ 2015 ತಿದ್ದುಪಡಿ 2021 ಬಾಲ್ಯವಿವಾಹ ನಿಷೇಧ ಕಾಯ್ದೆ 2006 ಕರ್ನಾಟಕ ತಿದ್ದುಪಡಿ ನಿಯಾವಳಿ 2016 ಕುರಿತು ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ಡಾ.ಕೆ.ರಾಘವೇಂದ್ರ ಭಟ್ ಉಪನ್ಯಾಸ ನೀಡುವರು. ಎ[illegible]ಜೆಪಿಯು ಅಧಿಕಾರಿಗಳ ಪಾತ್ರ ಮತ್ತು ಕರ್ತವ್ಯ ಹಾಗೂ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣೆ ಅಧಿನಿಯಮ 2012ರ ಕುರಿತು ಪೋಲೀಸ್ ಮಹಾನಿರ್ದೇಶಕರ ತರಬೇತಿ ಕಚೇರಿಯ ಪೋಲೀಸ್ ತರಬೇತಿದಾರ ಸಿ.ಬಿ.ರೋಹಿತ್ ಉಪನ್ಯಾಸ ನೀಡುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತ ತಿಳಿಸಿದ್ದಾರೆ.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘದ ವತಿಯಿಂದ ಚಿತ್ರದುರ್ಗ ಜಿಲ್ಲಾಮಟ್ಟದಲ್ಲಿ ಗಂಗಾಮತ, ಬೆಸ್ತರ, ಅಂಬಿಗರ ಸಮಾಜದ 2022-23ನೇ ಸಾಲಿನ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಫೆ.5 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಶೇ.90 ಮತ್ತು ಅದಕ್ಕಿಂತ ಹೆಚ್ಚಿನ ಅಂಕ ಗಳಿಸಿರುವ ಸಮಾಜದ ವಿದ್ಯಾರ್ಥಿಗಳು ಮಾತ್ರ ತಮ್ಮ ಜಾತಿ ಪ್ರಮಾಣ ಪತ್ರ ಮತ್ತು ಆಧಾರ್ ಕಾರ್ಡ್ ಹಾಗೂ ಅಂಕಪಟ್ಟಿಗಳ "ದೃಢೀಕೃತ" ಜೆರಾಕ್ಸ್ ಪ್ರತಿಗಳನ್ನು ತಮ್ಮ ಮೊಬೈಲ್ ಸಂಖ್ಯೆಯೊಂದಿಗೆ 2024ರ ಫೆಬ್ರವರಿ 5ಕ್ಕೆ ಮುಂಚಿತವಾಗಿ ತಲುಪುವಂತೆ ಅಧ್ಯಕ್ಷಕರು, ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘ, ಮದಕರಿ ಸರ್ಕಲ್, ರಂಗಯ್ಯನ ಬಾಗಿಲು ಬಳಿ, ಚಿತ್ರದುರ್ಗ ಇವರಿಗೆ ಅರ್ಜಿ ಸಲ್ಲಿಸುವುದು.
ಪ್ರತಿಭಾ ಪುರಸ್ಕಾರವನ್ನು ಫೆಬ್ರವರಿ 11ರಂದು ಭಾನುವಾರ ಬೆಳಿಗ್ಗೆ 11ಕ್ಕೆ ಶ್ರೀ ಗಂಗಾಂಬಿಕಾ ಸಮುದಾಯ ಭವನ ಉದ್ಘಾಟನಾ ಸಮಾರಂಭದಲ್ಲಿ ಪ್ರತಿಭಾ ಪುರಸ್ಕಾರ ಮಾಡಲಾಗುವುದು. ಈ ಅವಕಾಶವನ್ನು ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳು ಸದುಪಯೋಗ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಗಂಗಾಂಬಿಕಾ ಬೆಸ್ತರ ಸಂಘ ಪ್ರಕಟಣೆ ತಿಳಿಸಿದೆ.

### ಪತ್ರಿಕಾಗೋಷ್ಠಿಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಮಾಹಿತಿ

# ಫೆ.02 ರಿಂದ 04 ರವರೆಗೆ ಫಲ-ಪುಷ್ಪ ಪ್ರದರ್ಶನ

### ಭಾರತ ಸಂವಿಧಾನ ಕಲಾಕೃತಿ, ಚಂದ್ರಯಾನ-3, ಐತಿಹಾಸಿಕ ಕೋಟೆಯ ಮಳೆ ನೀರು ಕೊಯ್ಲು ಘಟಕಗಳು ಫಲಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ತೋಟಗಾರಿಕೆ ಕಚೇರಿ ಆವರಣದಲ್ಲಿ ಫೆಬ್ರವರಿ 02 ರಿಂದ 04 ರವರೆಗೆ 31ನೇ ಫಲ-ಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಭಾರತ ಸಂವಿಧಾನದ ಬಗ್ಗೆ ಕಲಾಕೃತಿ, ಚಂದ್ರಯಾನ-3, ಐತಿಹಾಸಿಕ ಚಿತ್ರದುರ್ಗ ಕೋಟೆಯಲ್ಲಿ ಮಳೆ ನೀರು ಕೊಯ್ಲು ಘಟಕಗಳು ಫಲ-ಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆಯಾಗಿರಲಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ತೋಟಗಾರಿಕೆ ಕಚೇರಿಯಲ್ಲಿ ಬುಧವಾರ 31ನೇ ಫಲ-ಪುಷ್ಪ ಪ್ರದರ್ಶನದ ಕುರಿತು ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ತೋಟಗಾರಿಕೆ ಇಲಾಖೆ, ಜಿಲ್ಲಾ ತೋಟಗಾರಿಕೆ ಸಂಘ ಇವರ ಸಂಯುಕ್ತಾಶ್ರಯದಲ್ಲಿ 31ನೇ ಫಲ-ಪುಷ್ಪ ಪ್ರದರ್ಶನ ಆಯೋಜಿಸಿದ್ದು, ಫೆ.2ರಂದು ಸಂಜೆ 6ಕ್ಕೆ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಫಲ-ಪುಷ್ಪ ಪ್ರದರ್ಶನ ಉದ್ಘಾಟನೆ ನೆರವೇರಿಸುವರು. ಫಲ-ಪುಷ್ಪ ಪ್ರದರ್ಶನಕ್ಕೆ ಎಲ್ಲ ಸಾರ್ವಜನಿಕರಿಗೂ ಉಚಿತ ಪ್ರವೇಶವಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಫಲಪುಷ್ಪ ಪ್ರದರ್ಶನ ವೀಕ್ಷಿಸಬೇಕು ಎಂದು ಮನವಿ ಮಾಡಿದರು.

ಚಿತ್ರದುರ್ಗ ಜಿಲ್ಲಾ ಫಲ-ಪುಷ್ಪ ಪ್ರದರ್ಶನವನ್ನು ಪ್ರತಿ ವರ್ಷವೂ ಆಯೋಜಿಸುತ್ತಿದ್ದು, ವಿವಿಧ ಜಾತಿಯ ಹೂಗಳು, ಹಣ್ಣುಗಳು, ತರಕಾರಿಗಳು, ಮತ್ತು ಹಲವು ವಿಶೇಷ ಬಗೆಯ ಅಲಂಕಾರಿಕಾ ಗಿಡಗಳನ್ನು ಬೆಳೆಸಿ ಪ್ರದರ್ಶಿಸಲಾಗುತ್ತಿದೆ. ಫಲ-ಪುಷ್ಪ ಪ್ರದರ್ಶನದಲ್ಲಿ ಹೂವಿನ ಗಿಡಗಳ ಬೃಹತ್ ಪ್ರದರ್ಶನ, ಇಕೆಬಾನ, ಕುಬ್ಜ ಮರ (ಬೊನ್ಸಾಯ್) ಗಿಡಗಳು, ತರಕಾರಿ ಕೆತ್ತನೆ, ಅಲಂಕಾರಿಕಾ ಗಿಡಗಳ ಜೋಡಣೆ ಹಾಗೂ ಜಿಲ್ಲೆಯ ರೈತರು ಬೆಳೆದಿರುವ ಹಣ್ಣು ಮತ್ತು ತರಕಾರಿಗಳ ಪ್ರದರ್ಶನ ಏರ್ಪಡಿಸಿ, ವಿವಿಧ ಸ್ಪರ್ಧೆಗಳನ್ನು ಸಹ ಹಮ್ಮಿಕೊಳ್ಳಲಾಗುವುದು. ಜೊತೆಗೆ ಸರ್ಕಾರದ ಕಾರ್ಯಕ್ರಮಗಳು, ಯೋಜನೆಗಳ ಕುರಿತು ಪ್ರದರ್ಶನ ಮಳಿಗೆ,



ಸ್ತ್ರೀಶಕ್ತಿ ಸಂಘಗಳ ಸ್ಥಳೀಯ ಉತ್ಪನ್ನಗಳ ಮಾರಾಟಕ್ಕೂ ಅವಕಾಶ ಕಲ್ಪಿಸಲಾಗಿದೆ ಎಂದರು.

**31ನೇ ಫಲ-ಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆಗಳು:** ಭಾರತದ ಸಂವಿಧಾನದ ಬಗ್ಗೆ ಕಲಾ ಕೃತಿ, ಚಂದ್ರಯಾನ-3, ಐತಿಹಾಸಿಕ ಚಿತ್ರದುರ್ಗ ಕೋಟೆಯಲ್ಲಿ ಮಳೆ ನೀರು ಕೊಯ್ಲು ಘಟಕಗಳು ಈ ಬಾರಿಯ ಫಲ-ಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆಗಳಾಗಿವೆ ಎಂದು ತಿಳಿಸಿದರು.

ಭಾರತದ ಸಂವಿಧಾನದ ಬಗ್ಗೆ ಕಲಾ ಕೃತಿ: ಸಂವಿಧಾನದ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಕರಡು ರಚನಾ ಸಮಿತಿ ಅಧ್ಯಕ್ಷರಾಗಿ ಸಂವಿಧಾನದ ಅಂತಿಮ ಪ್ರತಿಯನ್ನು ಸಾಂವಿಧಾನಿಕ ಸಭೆಯ ಅಧ್ಯಕ್ಷರಾದಂತಹ ಡಾ. ರಾಜೇಂದ್ರ ಪ್ರಸಾದ್ ಅವರಿಗೆ ದಿನಾಂಕ: 25.11.1949 ರಂದು ಸಲ್ಲಿಸಿದ್ದು, ಆ ಕ್ಷಣದ ಕಲಾಕೃತಿಯನ್ನು ರಚಿಸಿ ವಿವಿಧ ಹೂಗಳಿಂದ ಅಲಂಕರಿಸಲಾಗುವುದು ಎಂದರು.

**ಚಂದ್ರಯಾನ-3 :** ಇತ್ತೀಚಿಗೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಅವರು ಚಂದ್ರಯಾನ-3 ಯಶ್ವಸಿಯಾಗಿ ದಿನಾಂಕ: 23.08.2023ರಂದು ಚಂದ್ರನ ದಕ್ಷಿಣ ಧ್ರುವದಲ್ಲಿ ಸಾಫ್ಟ್ ಲ್ಯಾಂಡಿಂಗ್ ಮಾಡಿದ್ದು, ಪ್ರಪಂಚದ ಮೊದಲನೇ ದೇಶವಾಗಿರುತ್ತದೆ. ದೇಶದ ಹೆಮ್ಮೆಯ ವಿಷಯವಾಗಿದ್ದು, ಚಂದ್ರನ ಅಂಗಳದಲ್ಲಿ ಲ್ಯಾಂಡರ್ ವಿಕ್ರಮ್ ಹಾಗೂ ರೋವರ್ ಪ್ರಗ್ಯಾನ್ ಪ್ರತಿಕೃತಿಗಳ ಪ್ರದರ್ಶಿಸಲಾಗುವುದು ಎಂದರು.

ಐತಿಹಾಸಿಕ ಚಿತ್ರದುರ್ಗ ಕೋಟೆಯಲ್ಲಿ ಮಳೆ ನೀರು ಕೊಯ್ಲು ಘಟಕಗಳು: ಐತಿಹಾಸಿಕ ಚಿತ್ರದುರ್ಗ ಕೋಟೆಯಲ್ಲಿ ಅಂದಿನ ಕಾಲದಲ್ಲಿ ಅತ್ಯುತ್ತಮ ಮಳೆ ನೀರು ಕೊಯ್ಲು ಮಾಡಿ ಅಂದಿನ ಜನ, ಜಾನುವಾರುಗಳಿಗೆ ಹಾಗೂ ಕೃಷಿಗೆ ನೀರನ್ನು ಬಳಸುತ್ತಿದ್ದು, ಪ್ರಸ್ತುತ ಮಳೆ ನೀರು ಕೊಯ್ಲು ಮಾಡುವುದು ಜಿಲ್ಲೆಯ ಕೃಷಿಗೆ ಅವಶ್ಯಕವಾಗಿರುತ್ತದೆ. ಆದುದರಿಂದ, ಸದರಿ ಗೋಪಾಲಸ್ವಾಮಿ ಹೊಂಡ, ಅಕ್ಕತಂಗಿ ಹೊಂಡ, ಸಿಹಿನೀರು ಹೊಂಡ ಹಾಗೂ ಸಂತೆಹೊಂಡಗಳು ಒಂದಕ್ಕೊಂದು ಸಂಪರ್ಕಿಸಿರುವ ಮಾದರಿಗಳನ್ನು ಪ್ರದರ್ಶಿಸಲಾಗುವುದು ಎಂದರು.

**ನಾಲ್ವಡಿ ಕೃಷ್ಣರಾಜ ಒಡೆಯರ ಕಲಾಕೃತಿ:** ಜಲವೇ ಜೀವನ ಎಂಬುದನ್ನು ಅರಿತು ನಮ್ಮ ನಾಡಿನ ಬೆನ್ನೆಲುಬಾದ ಕೃಷಿಗೆ ಖುಷಿಯಿಂದ ನೀರುಣಿಸಬೇಕೆಂಬ ಕನಸಿನೊಂದಿಗೆ ಬರದ ನಾಡಾದ ಚಿತ್ರದುರ್ಗ ಜಿಲ್ಲೆಯಲ್ಲಿ 1907ರಲ್ಲಿ 'ವಾಣಿ ವಿಲಾಸ ಸಾಗರ' (ಮಾರಿ ಕಣಿವೆ) ಅಣೆಕಟ್ಟು ಕಟ್ಟಿ ಇಂದಿಗೂ ಜನರ ದಾಹವನ್ನು ತಣಿಸುತ್ತಿರುವ ಶ್ರೀಚೇತನ, ಹಾಗೂ ಚಿತ್ರದುರ್ಗ ಚಿಕ್ಕಜಾಜೂರು ರೈಲ್ವೆ ಮಾರ್ಗ ಮತ್ತು ಚಿತ್ರದುರ್ಗದಿಂದ ಬೆಂಗಳೂರಿಗೆ 220 ಮೈಲಿ ರಸ್ತೆ ಮಾರ್ಗವನ್ನು ಕಲ್ಪಿಸಿ ಸಾರಿಗೆ ಸಂಪರ್ಕವನ್ನು ಸ್ಥಿರಗೊಳಿಸಿದ ಮಹಾಚೇತನ ಈ ಎಲ್ಲಾ ಕೊಡುಗೆಗಳಿಂದ ಚಿತ್ರದುರ್ಗದ ಜನತೆ ಒಡೆಯರನ್ನು ಸದಾಕಾಲ ಸ್ಮರಿಸುತ್ತಾ ಜಿಲ್ಲೆಯ ಜನತೆ ನಿಮಗೆ ಚಿರಋಣಿಯಾಗಿರುತ್ತವೆ ಎನ್ನುವ ಆಶಯದೊಂದಿಗೆ ನಾಲ್ವಡಿ ಕೃಷ್ಣರಾಜ ಒಡೆಯರ ಕೃತಿ ಪ್ರದರ್ಶಿಸಲಾಗುವುದು ಎಂದರು.

**ಮಿಶ್ರ ತೋಟಗಾರಿಕೆ ಕೃಷಿ ಮಾದರಿ:** ಇತ್ತೀಚಿಗೆ ರೈತರು ಏಕ ಬೆಳೆಪದ್ಧತಿ ಅನುಸರಿಸುತ್ತಿದ್ದು, ಮುಂದಿನ ದಿನಗಳಲ್ಲಿ ರೈತರ ಆದಾಯಕ್ಕೆ ತೊಂದರೆ ಆಗಬಹುದಾಗಿದ್ದು, ವೈಜ್ಞಾನಿಕವಾಗಿ ನೀರು ಬಳಕೆಯೊಂದಿಗೆ ವಿವಿಧ ತೋಟಗಾರಿಕೆ ಬೆಳೆಗಳ ಮಿಶ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡಲ್ಲಿ ರೈತರ ಆದಾಯ ದ್ವಿಗುಣಗೊಳ್ಳಲು ಸಹಕಾರಿಯಾಗಿರುತ್ತದೆ. ಸದರಿ ಪದ್ಧತಿಯ ಮಾದರಿಯನ್ನು ಪ್ರದರ್ಶಿಸಲಾಗುವುದು ಎಂದು ಮಾಹಿತಿ ನೀಡಿದ ಅವರು ಇದರ ಜೊತೆಗೆ 12ನೇ ಶತಮಾನದಲ್ಲಿಯೇ ಸಮಸಮಾಜದ ಚಿಂತನೆಯಲ್ಲಿ ಅನುಭವ ಮಂಟಪವನ್ನ ಸ್ಥಾಪಿಸಿ ಸರ್ವಸಮಾನತೆಯ ಕನಸನ್ನು ಸರ್ವಕಾಲಿಕ ನನಸನ್ನಾಗಿಸಿದ ಧೀಮಂತ ಶಕ್ತಿ ಬಸವಣ್ಣನವರ ಕಲಾಕೃತಿ ಪ್ರದರ್ಶಿಸಲಾಗುವುದು. ಇದರ ಜೊತೆಗೆ ಶ್ರೀ ಶಿವಕುಮಾರ ಸ್ವಾಮಿಜಿ, ಶ್ರೀ ಸಿದ್ದೇಶ್ವರ ಸ್ವಾಮೀಜಿ ಹಾಗೂ ಶ್ರೀ ಪುಟ್ಟರಾಜ ಗವಾಯಿಗಳ ಕೃತಿಗಳು ಪ್ರದರ್ಶಿಸಲಾಗುವುದು ಎಂದರು.

ವಿವಿಧ ಪುಷ್ಪ ಜೋಡಣೆಗಳಿಗೆ ಹಲವು ಬಗೆಯ ವಿಶೇಷ ಹೂಗಳನ್ನು ಬಳಸುತ್ತಿರುವುದರ ಜೊತೆಗೆ ಕುಂಡದಲ್ಲಿ ಬೆಳೆದ ಚಿತ್ತಾಕರ್ಷಕ ವರ್ಣಗಳಿಂದ ಕೂಡಿದ ಸುಮಾರು 50ಕ್ಕೂ ಹೆಚ್ಚು ಬಗೆಯ ವಿವಿಧ ಜಾತಿಯ ಆರ್ಕಿಡ್ಸ್, ಕಾರ್ನೇಶನ್, ಕಾಕ್ಸ್ ಕೂಂಬ್, ಸೆಲೋಶಿಯಾ, ಪ್ಲಾಕ್ಸ್, ಗಾಕ್ಸೇನಿಯ, ಕಲಂಚಾ, ಲಿಲ್ಲಿಸ್, ಇಂಪೇಷನ್ಸ್ (ಮಿಕ್ಸ್‌ಡ್), ಡೇಲಿಯಾ (ಡ್ವಾರ್ಫ್), ಸಾಲ್ವಿಯಾ (ಕೆಂಪು, ನೀಲಿ ಕೇಸರಿ, ಬಿಳಿ) ಚೆಂಡು ಹೂ, ಚಿಂತಾಮಣಿ ಚೆಂಡು ಹೂ, ಜಿನಿಯಾ, ಪೆಟೂನಿಯಾ, ಕಾಸ್‌ಮಾಸ್, ಬಾಲ್ಸಂ, ಜಿರೇನಿಯಂ, ಹಾಲಿಹಾಕ್, ಆಂಟಿರಿನಮ್, ಡಯಾಂತಸ್, ಕ್ಯಾಲೊಂಡೋಲಾ, ಸೇವಂತಿಗೆ, ಪೆಂಟಾಸ್, ಫ್ಯಾನ್ಸಿ, ಇಫೋರ್ಬಿಯ ಮಿಲ್ಲಿ, ಫಾಯಿನ್‌ಸಿಟಿಯಾ, ಬಿಗೋನಿಯಾ, ವಿಂಕಾ, ಆಂತೋರಿಯಂ ಇತ್ಯಾದಿ ವಿವಿಧ ಪುಷ್ಪ ಸಸಿಗಳು, ನೂರಕ್ಕೂ ಹೆಚ್ಚು ಬಗೆಯ ತಳಿಗಳು, ಪ್ರದರ್ಶಿಸುವುದರೊಂದಿಗೆ ಪುಷ್ಪ ರಸಿಕರಿಗೆ ಪ್ರದರ್ಶನ ಮುದ ನೀಡಲಿದೆ ಎಂದು ತಿಳಿಸಿದರು.

ಕನ್ನಡಕ್ಕೆ 09 ಜ್ಞಾನಪೀಠ ಪ್ರಶಸ್ತಿಗಳನ್ನು ತಂದುಕೊಟ್ಟು, ಕನ್ನಡ ಸಾರಸ್ವತಲೋಕವನ್ನು ಶ್ರೀಮಂತಗೊಳಿಸಿದ ಮಹಾನೀಯರ ಕಲಾಕೃತಿಗಳನ್ನು ಹಣ್ಣು ಮತ್ತು ತರಕಾರಿ ಕೆತ್ತನೆಯಲ್ಲಿ ಪ್ರದರ್ಶಿಸಲಾಗುವುದು. ತೆಂಗಿನ ಚಿಪ್ಪಿನಲ್ಲಿ ವಿವಿಧ ರೀತಿಯ ಕಲಾಕೃತಿಗಳನ್ನು ಕೆತ್ತನೆ ಮಾಡಿದ ಪ್ರದರ್ಶಿಕೆಗಳನ್ನು ಪ್ರದರ್ಶಿಸಿಲಾಗುವುದು. ನೀರು ಹರಿಯುವಂತೆ ಇರುವ ಜಲಪಾತಗಳನ್ನು ಫಲ-ಪುಷ್ಪ ಪ್ರದರ್ಶನದಲ್ಲಿ ಮಾದರಿ ಪ್ರದರ್ಶಿಸಲಾಗುವುದು. ಪ್ರದರ್ಶನದಲ್ಲಿ ಜಿಲ್ಲೆಯ ವಿವಿಧ ಇಲಾಖೆಗಳಿಂದ ತಮ್ಮ ಇಲಾಖೆ ಯೋಜನೆಗಳ ಬಗ್ಗೆ ಮಾಹಿತಿ ನೀಡುವುದರಿಂದ ಒಂದೇ ಸೂರಿನಡಿ ಎಲ್ಲಾ ಇಲಾಖೆಗಳಲ್ಲಿ ಸಿಗುವ ಸೌಲಭ್ಯಗಳ ಮಾಹಿತಿ ರೈತರಿಗೆ ಹಾಗೂ ಆಸಕ್ತ ಸಾರ್ವಜನಿಕರಿಗೆ ದೊರೆಯುತ್ತದೆ ಎಂದರು.

ಪ್ರದರ್ಶನದ ಅಂಗವಾಗಿ ನಗರದ ಶಾಲಾ ಮಕ್ಕಳಿಗೆ ಜಾನಪದ ಹಾಗೂ ಭಾವಗೀತೆ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಹಣ್ಣು ಮತ್ತು ಹೂ ತರಕಾರಿಗಳನ್ನು ಬಳಸಿ ಪ್ಯಾನ್ಸಿ ಡ್ರೆಸ್ ಸ್ಪರ್ಧೆ, ರಂಗೋಲಿ ಸ್ಪರ್ಧೆ, ಚಿಕ್ಕ ಮಕ್ಕಳಿಗೆ ಹಣ್ಣು ಮತ್ತು ತರಕಾರಿಗಳ ಗುರುತಿಸುವ ಸ್ಪರ್ಧೆ, ತರಕಾರಿ ಕೆತ್ತನೆ, ಹೂ ಜೋಡಣೆ ಸ್ಪರ್ಧೆ, ಬೋನ್ಸಯ್ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಈ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಆಕರ್ಷಕ ಬಹುಮಾನ, ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಿಸಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಜಿ.ಸವಿತಾ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿ ಬಿ.ದೇವರಾಜು, ಜಿಲ್ಲಾ ತೋಟಗಾರಿಕೆ ಸಂಘದ ಖಜಾಂಚಿ ನಾಗರಾಜ ಬೇದ್ರೆ ಇದ್ದರು.

## ನಾಯಕನಹಟ್ಟಿ: ಸಂವಿಧಾನ ಜಾಗೃತಿ ರಥ ಯಾತ್ರೆಗೆ ಚಾಲನೆ

» **ನಾಯಕನಹಟ್ಟಿ**

ಪಟ್ಟಣದ ಸಂವಿಧಾನ ಜಾಗೃತಿ ರಥ ಯಾತ್ರೆಯನ್ನು ಪೋಲೀಸ್ ಠಾಣೆ ಮುಂಭಾಗದಲ್ಲಿ ತಾಲ್ಲೂಕು ದಂಡಾಧಿಕಾರಿಗಳಾದ ರೆಹಮನ್ ಪಾಷಾ ಪುಷ್ಪಾರ್ಚನೆ ಮಾಡುವುದರ ಮೂಲಕ ಗೌರವದೊಂದಿಗೆ ರಥ ಯಾತ್ರೆಗೆ ಚಾಲನೆ ನೀಡಿದರು. ಡಾ॥ಬಿ.ಆರ್.ಅಂಬೇಡ್ಕರ್‌ರವರ ಅಭಿಮಾನಿಗಳು ಮತ್ತು ಅಂಬೇಡ್ಕರ್ ಯುವಕ ಸಂಘದ ಯುವಕರು ಡ್ರಂ ಸೆಟ್ ವಾದ್ಯಗಳೊಂದಿಗೆ ಪಟಾಕಿ ಅಚ್ಚುವುದರೊಂದಿಗೆ, ಅದ್ದೂರಿಯಾಗಿ ಪಟ್ಟಣದಲ್ಲಿ ಜಾಗೃತಿ ರಥ ಯಾತ್ರೆಯನ್ನು ಪಟ್ಟಣಗಳ ಪ್ರಮುಖ ಬೀದಿಯಲ್ಲಿ ಮೆರವಣಿಗೆ ಮಾಡಿ ಗೌರವದೊಂದಿಗೆ ಕಳುಹಿಸಲಾಯಿತು.ಈ ಸಂದರ್ಭದಲ್ಲಿ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್-1 ಸಹಾಯಕ ನಿರ್ದೇಶಕರು ಮಂಜುನಾಥ, ನಾಯಕನಹಟ್ಟಿ ಉಪತಹಶೀಲ್ದಾರ್ ಶಕುಂತಲ.ಬಿ, ಪಟ್ಟಣ ಪಂಚಾಯಿತಿ, ಮುಖ್ಯಾಧಿಕಾರಿ ಎಂ.ಶಿವಕುಮಾರ, ನಾಯಕನಹಟ್ಟಿ ಪಿಎಸ್‌ಐ ದೇವರಾಜ್, ಎ.ಎಸ್.ಐ ತಿಪ್ಪೇಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಪ್ರಥಮ ದರ್ಜೆ ಸಹಾಯಕರು ಮುಸ್ಟೂರಪ್ಪ, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಪರಿಶಿಷ್ಟ ಪಂಗಡದ ವಿದ್ಯಾರ್ಥಿ ನಿಲಯದ ಪಾಲಕರು ರಮೇಶ್, ಚೇತನ್‌ಕುಮಾರ್ ಕಂದಾಯ ನಿರೀಕ್ಷಕರು, ಪಟ್ಟಣ ಪಂಚಾಯಿತಿಯ ನೌಕರರು ಮತ್ತು ಸಿಬ್ಬಂದಿಗಳು, ಕಂದಾಯ ಇಲಾಖೆಯ ಗ್ರಾಮ ಲೆಕ್ಕಾಧಿಕಾರಿಗಳು, ಪೋಲೀಸ್ ಇಲಾಖೆ ಸಿಬ್ಬಂದಿ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು, ಅಂಗನವಾಡಿ ಶಿಕ್ಷಕಿಯರು ಮತ್ತು ಸಹಾಯಕಿಯರು, ಅಂಬೇಡ್ಕರ್ ಯುವಕ ಸಂಘದ ಯುವಕರು, ಪಟ್ಟಣದ ಮುಖ್ಯಸ್ಥರು, ಇನ್ನೂ ಇತರರು ಸಂವಿಧಾನ ಜಾಗೃತಿಯನ್ನು ಯಾತ್ರೆಯಲ್ಲಿ ಅಕ್ಕ-ಪಕ್ಕದ ಗ್ರಾಮಸ್ಥರು ಪಾಲ್ಗೊಂಡಿದ್ದರು.



**ಪ್ರಮುಖ ಸುದ್ದಿ**

# ಚಿತ್ರದುರ್ಗ ರಾಜ್ಯ ಮಟ್ಟದ ಪರಿಸರ ಜಾಗೃತಿ ಸಮಾವೇಶ

» **ಚಿತ್ರದುರ್ಗ**

ಏರುತ್ತಿರುವ ತಾಪಮಾನ ಹಾಗೂ ಹ ವ ವ ು ಾ ನ ದ ಲ್ಲಾ ಗ ು ತ್ತಿ ರ ು ವ ಬದಲಾವಣೆಯ ತೀವ್ರತೆಯ ಬಗ್ಗೆ ಮತ್ತು ಚಿತ್ರದುರ್ಗದ ಪರಿಸರ ಸಮಸ್ಯೆಗಳ ಬಗ್ಗೆ ರಾಜ್ಯ ಮಟ್ಟದ ಪರಿಸರ ಜಾಗೃತಿ ಸಮಾವೇಶ ಮತ್ತು ಸಂವಾದ ಕಾರ್ಯಕ್ರಮವೂ ಫೆ. 4 ರಂದು ನಗರದ ಕ್ರೀಡಾ ಭವನದಲ್ಲಿ ಬೆಳಿಗ್ಗೆ 10 ರಿಂದ ಹಮ್ಮಿಕೊಳ್ಳಲಾಗಿದೆ ಎಂದು ಸಂಘಟಕರಾದ ಅವಿನಾಶ್ ತಿಳಿಸಿದರು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಶಿವಸುಂದರ್ ರವರು ತಾಪಮಾನ ಏರಿಕೆಯನ್ನು ಕಮ್ಮಿ ಮಾಡಲು ಜಾಗತಿಕ ಮಟ್ಟದಲ್ಲಿ ತೆಗೆದುಕೊಂಡ ನಿರ್ಣಯಗಳು ಹಾಗೂ ಇಂದಿನ ಸ್ಥಿತಿಗತಿಯ ಬಗ್ಗೆ ಮತ್ತು ಯಲ್ಲಪ್ಪರೆಡ್ಡಿಯವರು ತಾಪಮಾನ ಏರಿಕೆಯಿಂದ ಜೀವಸಂಕುಲ ಗಾಳಿ, ನೀರು ಮತ್ತು ಆಹಾರದ ಮೇಲಾಗುತ್ತಿರುವ ದುಷ್ಪರಿಣಾಮಗಳ ಬಗ್ಗೆ ಸಮಾವೇಶದಲ್ಲಿ ಮಾತನಾಡಲಿದ್ದಾರೆ ಎಂದರು.

ಯಾದವ ರೆಡ್ಡಿ ಮಾತನಾಡಿ, ಕಳೆದ 50-60 ವರ್ಷಗಳಿಂದ ಈಚೆಗೆ ಜಾಗತಿಕವಾಗಿ ಬರುತ್ತಿರುವ ತಾಪಮಾನ ಹಾಗೂ ಹವಾಮಾನದಲ್ಲಿ ಆಗುತ್ತಿರುವ ಬದಲಾವಣೆಯಿಂದ ಮಣ್ಣು, ಗಾಳಿ, ನೀರು, ವಾತಾವರಣ ಎಲ್ಲವೂ ಬಿಸಿಯಾಗುತ್ತಿದೆ. ಹಾಗೂ ಕೆಲವು ಅನಿಲಗಳಿಂದ, ಆಮ್ಲಗಳಿಂದ, ಧೂಳಿನ ಕಣಗಳಿಂದ, ರಾಸಾಯನಿಕಗಳಿಂದ ಕಲಿಷಿತಗೊಂಡಿವೆ. ಅತಿವೃಷ್ಟಿ-ಅನಾವೃಷ್ಟಿಗಳು ಒಕ್ಕೊಟ್ಟಿಗೆ ಸಂಭವಿಸುತ್ತಿವೆ, ಬಿಸಿ ಅಲೆಗಳ



ಪ್ರಮಾಣ ಹೆಚ್ಚಾಗಿದೆ. ಸೈಕ್ಲೋನ್‌ಗಳ ಹಾವಳಿ ಹೆಚ್ಚಾಗಿದೆ. ಕಾಡು ಬೆಂಕಿಗೆ ಆಹುತಿಯಾಗುತ್ತಿದೆ.

ಸಮುದ್ರದಲ್ಲಿ ಆಮ್ಲೀಯತೆ ಹೆಚ್ಚಾಗಿದೆ, ಹಿಮಪರ್ವತಗಳು ಕರಗುತ್ತಿವೆ.ಲಂಡನ್, ನವದೆಹಲಿ, ಕರ್ನಾಟಕ ಮೂಲದ ವಿವಿಧ ತಜ್ಞರು 14 ವರ್ಷಗಳ ಕಾಲ ಅಧ್ಯಯನ ನಡೆಸಿ ಸಿದ್ದ ಪಡಿಸಿರುವ "ಕರ್ನಾಟಕದಲ್ಲಿ ಎಂಬ ವರದಿಯಲ್ಲಿ ಜಾಗತಿಕವಾಗಿ ಏರುತ್ತಿರುವ ತಾಪಮಾನದಿಂದ ಮತ್ತು ಹವಾಮಾನದಲ್ಲಾಗುತ್ತಿರುವ ಬದಲಾವಣೆಯಿಂದ ಭಾರತ ದೇಶ, ಅದರಲ್ಲೂ ಕರ್ನಾಟಕ ರಾಜ್ಯದಲ್ಲಿ ಬಾರಿ ನಷ್ಟ ಉಂಟಾಗಲಿದೆ ಎಂದು ಎಚ್ಚರಿಸಿದ್ದಾರೆ, ಜೊತೆಗೆ ಮನುಷ್ಯರ ಆರೋಗ್ಯದ ಮೇಲೆ ಅನೇಕ ಪರಿಣಾಮ ಗಳನ್ನು ಬೀರುತ್ತಿದ್ದು ಜೀವವೈವಿಧ್ಯತೆ ನಶಿಸುತ್ತಿದೆ. ಕೃಷಿಯಲ್ಲಿ ಇಳುವರಿಯ ಮೇಲೆ ದುಷ್ಪರಿಣಾಮ ಬೀರುತ್ತಿದ್ದು, ಮುಂದಿನ ದಿನಗಳಲ್ಲಿ ಕರ್ನಾಟಕದ 68 ಪ್ರತಿಶತದಷ್ಟು ಕೃಷಿ ಭೂಮಿ ನೀರಿಲ್ಲದೆ, ಅಕಾಲಿಕ ಬರಕ್ಕೆ ತುತ್ತಾಗಿ ಬಂಜರಾಗುವ ಎಲ್ಲಾ ಲಕ್ಷಣಗಳು ಗೋಚರಿಸುತ್ತಿದೆ ಎಂದು ತಜ್ಞರು ತಿಳಿಸಿದ್ದಾರೆ ಎಂದರು.ದೊಡ್ಡಮಲ್ಲಯ್ಯ ಮಾತನಾಡಿ, ಈ ಹವಾಮಾನ ಬದಲಾವಣೆಯಿಂದ ಪ್ರಪಂಚದಾತ್ಯಂತ ಪ್ರತಿವರ್ಷವೂ ಸುಮಾರು 1.5 ಲಕ್ಷ ಜನರು ಸಾವನ್ನಪ್ಪುತ್ತಿದ್ದಾರೆ ಹಾಗೂ ಪ್ರತಿವರ್ಷವೂ ಸರಿಸುಮಾರು 300-400 ಲಕ್ಷ ಕೋಟಿಯಷ್ಟು ಆರ್ಥಿಕ ಹೊರೆ ಜಗತ್ತಿಗೆ ಆಗುತ್ತಿದೆ ಎಂದು ವಿಶ್ವಸಂಸ್ಥೆಯ ವರದಿ ಮಾಡಿದೆ. ಮತ್ತು 2030-2050 ರ ಮಧ್ಯೆ ಬಿಸಿಗಾಳಿ, ಅತಿವೃಷ್ಟಿ-ಅನಾವೃಷ್ಟಿ, ಬಿಸಿಲಿನ ತೀವ್ರತೆಯಂತಹ ಹಲವು ಕಾರಣಗಳಿಂದ ಹಾಗೂ ಅಪೌಷ್ಟಿಕತೆ ಮತ್ತು ಸಾಕ್ರಮಿಕ ರೋಗಗಳಿಂದ ಪ್ರತಿವರ್ಷವೂ 2.5 ರಿಂದ 3 ಲಕ್ಷ ಜನರು ಸಾವನ್ನಪ್ಪಬಹುದು ಹಾಗೂ ಪ್ರತಿವರ್ಷವೂ ಸರಿಸುಮಾರು 500 ಲಕ್ಷ ಕೋಟಿಗೂ ಅಧಿಕ ಪ್ರಮಾಣದಲ್ಲಿ ಆರ್ಥಿಕ ಹೊರೆಯಾಗಬಹುದು ಎಂದು ತನ್ನ ಅಂತಕವನ್ನು ಹೊರಹಾಕಿದೆ ಮತ್ತೊಂದು ಆಘಾತಕಾರಿ ಸಂಗತಿ.

ನಮ್ಮ ಜೊತೆಯೇ ಜೀವಿಸುತ್ತಿದ್ದ ಸುಮಾರು 42,100 ವಿವಿಧ ಪ್ರಭೇದದ ಜೀವಸಂಕುಲವೂ ನಶಿಸಿದೆ ಎಂದು ಐಪಿಸಿಸಿ ವರದಿ ಹೇಳುತ್ತದೆ. ಇದರಲ್ಲಿ ನದಿಗಳು, ಕೆರೆಕಟ್ಟೆಗಳು ಮುಂತಾದ ಸಿಹಿನೀರಿನ ಪ್ರದೇಶಗಳಲ್ಲಿ ವಾಸಿಸುವ ಜೀವಿಸುವಗಳು ಸುಮಾರು 83 ಪ್ರತಿಶತದಷ್ಟು ಹಾಗೂ ಹಾವು, ಬೆಕ್ಕು, ಇಲಿ, ಹೆಗ್ಗಣ, ಇರುವೆ, ಕಪ್ಪೆ, 38 ಕರಡಿ, ಹಿಮಕರಡಿಯಂತಾದ ಸುಮಾರು 36 ಪ್ರತಿಶತದಷ್ಟು ನಶಿಸಿವೆ ಎಂದು ವರದಿ ಹೇಳುತ್ತದೆ ಎಂದರು.

ಆದರೆ ನಮ್ಮ ದೌರ್ಭಾಗ್ಯ ಎನ್ನುವಂತೆ ಇಂತಹ ಹಲವಾರು ವರದಿಗಳು ಕಾಗದದಲ್ಲಿ ಬದ್ರವಾಗಿವೆ ಕಾರ್ಯರೂಪಕ್ಕೆ ಬರುವ ಯಾವುದೇ ಲಕ್ಷಣಗಳು ಕಾಣುತ್ತಿಲ್ಲ. ಏಕೆಂದರೆ ಕಾರ್ಖಾನೆಗಳಿಗೆ ನಿರ್ಭಂದನೆ ಹಾಕಲಾಗಿಲ್ಲ, ಕಾಡನ್ನು ಸಂರಕ್ಷಿಸುತ್ತಿಲ್ಲ. ವಾಹನಗಳಿಗೆ ಕಡಿವಾಣ ಹಾಕುತ್ತಿಲ್ಲ. ಕಲ್ಲಿದ್ದಲ ಬಳಕೆಯನ್ನು ನಿಲ್ಲಿಸಲಾಗುತ್ತಿಲ್ಲ, ಸೌರ ಶಕ್ತಿಯನ್ನು ಸಂಪೂರ್ಣವಾಗಿ ಬಳಕೆ ಮಾಡಿಕೊಳ್ಳುತ್ತಿಲ್ಲ.

ರಾಸಾಯನಿಕ ಮತ್ತ ಕೃಷಿ ಪದ್ಧತಿಯ ಬಗ್ಗೆ ಒಲವೂ ತೋರಿಸುತ್ತಿಲ್ಲ. ಕನಿಷ್ಟ ಪಕ್ಷ ಪರ್ಯಾಯ ವ್ಯವಸ್ಥೆಗಳ ಬಗ್ಗೆ ಚರ್ಚೆ, ಸಂವಾದವನ್ನು ಕನಿಷ್ಟ ಪಕ್ಷ ವಿಜ್ಞಾನಿಗಳು, ತಜ್ಞರ ಮಾತುಗಳನ್ನು ಆಲಿಸುತ್ತಿಲ್ಲ. ಈಗಲಾದರೂ ವಯಕ್ತಿಕವಾಗಿ ನಾವು, ಆದಿಕಾರಿ ವರ್ಗ, ಜನಪ್ರತಿನಿಧಿಗಳು, ಸರ್ಕಾರಗಳು ಎಚ್ಚೆತ್ತುಕೊಳ್ಳಬೇಕಾಗಿದೆ. ಪ್ರಕೃತಿ-ಪರಿಸರದ ಸಂರಕ್ಷಣೆಗೆ ಪೂರಕವಾದ ಕಾನೂಗಳನ್ನು ಇನ್ನಷ್ಟು ಕಠಿಣಗೊಳಿಸಬೇಕು ಹಾಗೂ ನಾವದನ್ನು ನಿಷ್ಠೆಯಿಂದ ಪಾಲಿಸಬೇಕು. ಆಗಷ್ಟೇ ನಮ್ಮನ್ನು ಸಾವಿನ ಕೂಪಕ್ಕೆ ನೂಕುತ್ತಿರುವ ಆ ಶಾಖವರ್ಧಕ ಅನಿಲಗಳ ಉತ್ಪಾದನಾ ಪ್ರಮಾಣವನ್ನು ಗಣನೀಯವಾಗಿ ಕಡಿಮೆ ಮಾಡಲು ಸಾಧ್ಯವಿದೆ ಎಂದರು.

ಗೋಷ್ಟಿಯಲ್ಲಿ ಷಫಿವುಲ್ಲಾ, ಧನಂಜಯ. ಸಿದ್ದರಾಜು ಜೋಗಿ, ದಾಸೇಗೌಡ, ಹೊಳೆಯಪ್ಪ, ಮಹಾಂತೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ನೇರ ಸಂದರ್ಶನ

» **ಚಿತ್ರದುರ್ಗ**

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಇದೇ ಫೆ.5ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ನೇಮಕಾತಿ ಸಂದರ್ಶನ ಹಮ್ಮಿಕೊಳ್ಳಲಾಗಿದೆ. ಐಸಿಐಸಿಐ ಬ್ಯಾಂಕ್ (ಟಿವಿಎಸ್ ಟ್ರೈನಿಂಗ್ ಸರ್ವೀಸಸ್) ಮತ್ತು ಕ್ರೆಡಿಟ್ ಅಕ್ಸೆಸ್ ಗ್ರಾಮೀಣ್ ಲಿಮಿಟೆಡ್‌ನಲ್ಲಿ ಖಾಲಿ ಇರುವ ರಿಲೇಶಿಯನ್‌ಶಿಪ್ ಮ್ಯಾನೇಜರ್ ಮತ್ತು ಟ್ರೈನೀ ಕೇಂದ್ರ ಮ್ಯಾನೇಜರ್ ಹುದ್ದೆಗಳು ಖಾಲಿ ಇದ್ದು, ಈ ಕಂಪನಿಗಳಿಗೆ ಕಾರ್ಯನಿರ್ವಹಿಸಲು 18 ರಿಂದ 28 ವರ್ಷದೊಳಗಿನ ಪುರುಷ, ಮಹಿಳೆ ಅಭ್ಯರ್ಥಿಗಳಿಗೆ ನೇರವಾಗಿ ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳುವ ಸಂಬಂಧ ಭಾಗವಹಿಸಲಿವೆ.
ಐಸಿಐಸಿಐ ಬ್ಯಾಂಕ್ (ಟಿವಿಎಸ್ ಟ್ರೈನಿಂಗ್ ಸರ್ವೀಸಸ್)ನಲ್ಲಿ ರಿಲೇಶಿಯನ್‌ಶಿಪ್ ಮ್ಯಾನೇಜರ್‌ನ 80 ಹುದ್ದೆಗಳು ಖಾಲಿ ಇದ್ದು, ಯಾವುದೇ ಪದವಿ (ಬಿ.ಇ, ಬಿ.ಟೆಕ್ ಮತ್ತು ಎಂಬಿಎ ಅನ್ವಯಿಸುವುದಿಲ್ಲ) ಹೊಂದಿರಬೇಕು. ಪ್ರತಿ ಮಾಹೆ 21 ಸಾವಿರ ವೇತನ ನೀಡಲಾಗುವುದು. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸಬೇಕಿದೆ. ಕ್ರೆಡಿಟ್ ಅಕ್ಸೆಸ್ ಗ್ರಾಮೀಣ್ ಲಿಮಿಟೆಡ್‌ನಲ್ಲಿ ಟ್ರೈನೀ ಕೇಂದ್ರ ಮ್ಯಾನೇಜರ್‌ನ 40 ಹುದ್ದೆಗಳು ಖಾಲಿ ಇದ್ದು, ಪಿಯುಸಿ, ಐಟಿಐ, ಯಾವುದೇ ಪದವಿ ಹೊಂದಿರಬೇಕು. ಮಾಸಿಕ ವೇತನ 13 ಸಾವಿರ ನೀಡಲಾಗುವುದು. ದಾವಣಗೆರೆ, ಚಿತ್ರದುರ್ಗ, ತುಮಕೂರು, ಶಿವಮೊಗ್ಗ ಜಿಲ್ಲೆಗಳಲ್ಲಿ ಮಾತ್ರ ಕೆಲಸ ನಿರ್ವಹಿಸಬೇಕಿದೆ. ಆಸಕ್ತರು ಬಯೋಡಾಟಾ, ವಿದ್ಯಾರ್ಹತೆಯ ಪ್ರಮಾಣ ಪತ್ರ, ಫೋಟೋ, ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ರಂಗೋಲಿ ಸ್ಪರ್ಧೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಬೇಟಿ ಬಚಾವೋ, ಬೇಟಿ ಪಡಾವೋ ಕಾರ್ಯಕ್ರಮದಡಿಯಲ್ಲಿ ಹೆಣ್ಣು ಮಕ್ಕಳ ರಕ್ಷಣೆ ಮತ್ತು ಶಿಕ್ಷಣ ಪ್ರೋತ್ಸಾಹಿಸುವ ಕುರಿತು ಅರಿವು ಮೂಡಿಸಲು ಫೆ.3 ರಂದು ಮಧ್ಯಾಹ್ನ 2 ಗಂಟೆಗೆ ನಗರದ ಗ್ಲಾಸ್ ಹೌಸ್‌ನಲ್ಲಿ ರಂಗೋಲಿ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಆಸಕ್ತ ಮಹಿಳೆಯರು ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ಸೂಕ್ತ ತಲೆಬರಹ, ಸ್ಲೋಗನ್‌ನೊಂದಿಗೆ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಆಸಕ್ತರು ಜ.31 ರೊಳಗಾಗಿ ಕಚೇರಿಯಲ್ಲಿ ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸರ್ಕಾರಿ ಬಾಲಕರ ಬಾಲಮಂದಿರ ಕಟ್ಟಡ, 14 ನೇ ಮುಖ್ಯ ರಸ್ತೆ, ಕುವೆಂಪು ನಗರ, ಎಂ.ಸಿ.ಸಿ. ಬಿ ಬ್ಲಾಕ್ ದಾವಣಗೆರೆ ದೂ.ಸಂ: 08192-264056 ನ್ನು ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಿಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ.

### ಗೃಹರಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಾದ್ಯಂತ ಖಾಲಿ ಇರುವ (59 ಪುರುಷ + 10 ಮಹಿಳೆ) ಒಟ್ಟು 69 ಸ್ವಯಂ ಸೇವಾ ಗೃಹರಕ್ಷಕರ ಸ್ಥಾನಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. 19 ರಿಂದ 45 ವರ್ಷ ವಯೋಮಾನದೊಳಗಿನ ವರಾಗಿಬೇಕು. 10 ನೇ ತರಗತಿ ಪಾಸಾಗಿರುವ, ಆರೋಗ್ಯವಂತ ಉತ್ತಮ ದೈಹಿಕ ಸಾಮರ್ಥ್ಯ ಹೊಂದಿದವರು, ರಾಜಕೀಯ ಪಕ್ಷ-ಸಂಘ ಸಂಸ್ಥೆಗಳ ಸದಸ್ಯರು, ಕಾರ್ಯಕರ್ತರಾಗಿರಬಾರದು. ಕಾನೂನು ಮೊಕದ್ದಮೆಗಳಲ್ಲದವರು ಹಾಗೂ ಸಂಬಂಧಪಟ್ಟ ಘಟಕಗಳಿಂದ 6 ಕಿ.ಮೀ ವ್ಯಾಪ್ತಿಯೊಳಗಿನ, ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ದಾವಣಗೆರೆ ಘಟಕದಲ್ಲಿ ಮಹಿಳಾ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಖಾಲಿ ಇರುವ ಹುದ್ದೆಗಳ ವಿವರ: ಹರಿಹರ-3, ಮಲೇಬೆನ್ನೂರು-7, ಹೊನ್ನಾಳಿ-4, ನ್ಯಾಮತಿ-15, ಚನ್ನಗಿರಿ-3, ಸಂತೇಬೆನ್ನೂರು-4, ಜಗಳೂರು-8,ಬಿಳಿಚೋಡು-11, ಬಸವನಕೋಟೆ-4 ಸ್ಥಾನಗಳು ಖಾಲಿ ಇರುತ್ತವೆ. ಫೆ.9 ರಿಂದ ಕಚೇರಿ ವೇಳೆಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಕಚೇರಿಗೆ ಫೆ.12 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾದೇಷ್ಟರ ಕಚೇರಿ, ದೇವರಾಜ್ ಅರಸ್ ಬಡಾವಣೆ ಬಿ ಬ್ಲಾಕ್, ಶಿವಪಾರ್ವತಿ ಕಲ್ಯಾಣ ಮಂಟಪ ಪಕ್ಕ, ಶಿವಾಲಯ ಹಿಂಭಾಗ, ದಾವಣಗೆರೆ-577006 ದೂ.ಸಂ: 08192-250784 ಸಂಪರ್ಕಿಸಬಹುದಾಗಿದೆ.

### ದೂರದೃಷ್ಟಿಯ ಆಯವ್ಯಯ

10 ವರ್ಷಗಳ ಅವಧಿಯ ಕೇಂದ್ರದ ನಮೋ ಸರ್ಕಾರದಲ್ಲಿ ರೈತ-ಯುವ-ಮಹಿಳಾ ಸಬಲೀಕಕರಣ, ಜನಕಲ್ಯಾಣ ಯೋಜನೆ ಜೊತೆಗೆ ದುಡಿಯುವ ಕೈ ಬಲಪಡಿಸುವ ನಿರ್ಧಾರಗಳಾಗಿವೆ. ಹೊಸ ಉದ್ಯಮ-ಕೌಶಲ್ಯ ಅಭಿವೃದ್ಧಿಯಿಂದ ಕೋಟ್ಯಾಂತರ ಉದ್ಯೋಗ ಸೃಷ್ಟಿಯಾಗಿವೆ. ಚುನಾವಣಾ ಪೂರ್ವ ಬಜೆಟ್ ಜನರ ಓಲೈಕೆ ಮಾಡುವ ಬಜೆಟ್‌ಗಳೆನ್ನುವ ಪರಿಪಾಠಕ್ಕೆ ತಿಲಾಂಜಲಿ ಇತ್ತು ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ದಿಟ್ಟತನದಿಂದ ಜನತೆಯ ಮುಂದಿರಿಸಿ ಮುಂದಿನ ಹಾದಿಯ ಬಗ್ಗೆ ಸ್ಪಷ್ಟತೆ ಹೇಳುವ ವಿಕಸಿತ ಭಾರತದ ದೂರದೃಷ್ಟಿಯ ಆಯಾವ್ಯಾಹ ಮಂಡಿಸಿದ ನಿರ್ಮಲಾ ಸೀತಾರಾಮನ್‌ರವರಿಗೆ ಅಭಿನಂದನೆಗಳು.

» **ನಾಗರಾಜ್ ಬೇದ್ರೆ, ಬಿಜೆಪಿ ಜಿಲ್ಲಾ ವಕ್ತಾರರು,ಚಿತ್ರದುರ್ಗ**

---

**ಜ್ಞಾನಗಂಗೋತ್ರಿಯಲ್ಲಿ ಚಿಂತನ ಮಂಥನ ಕಾರ್ಯಕ್ರಮ- ಡಾ.ಕರಿಯಪ್ಪ ಮಾಳಿಗೆ ಉಪನ್ಯಾಸ**

# ಕನ್ನಡ ಕಾವ್ಯದ ಸೊಬಗನ್ನು ಹೆಚ್ಚಿಸಿದ ಬೇಂದ್ರೆ

» **ಚಿತ್ರದುರ್ಗ**

ಪ್ರೀತಿ ಮತ್ತು ದಾಂಪತ್ಯವನ್ನು ಒಂದುಗೂಡಿಸಿ ಕಾವ್ಯವನ್ನು ಕಟ್ಟಿಕೊಟ್ಟಿರುವ ಬೇಂದ್ರೆ ಬಡತನದ ಬೇಗೆಯನ್ನೂ ಬದಿಗಿಟ್ಟು ಒಲವೇ ನಮ್ಮ ಬದುಕು ಎನ್ನುವುದನ್ನು ತೋರಿದ್ದಾರೆ ಎಂದು ಡಾ.ಕರಿಯಪ್ಪ ಮಾಳಿಗೆ.

ದಾವಣಗೆರೆ ವಿಶ್ವವಿದ್ಯಾಲಯದ ಜಿ.ಆರ್. ಹಳ್ಳಿಯ ಜ್ಞಾನಗಂಗೋತ್ರಿಯಲ್ಲಿ ಬುಧವಾರ ಆಯೋಜಿಸಿದ್ದ ದ.ರಾ.ಬೇಂದ್ರೆಯವರ ಜನ್ಮದಿನದ ಪ್ರಯುಕ್ತ ನಡೆದ ಚಿಂತನ ಮಂಥನ ಕಾರ್ಯಕ್ರಮದಲ್ಲಿ ಬೇಂದ್ರೆ ಕಾವ್ಯದ ನೆಲೆಗಳು ಕುರಿತು ಉಪನ್ಯಾಸ ನೀಡಿದರು.


ಮನುಷ್ಯರಿಗೆ ದಕ್ಕಿರುವ ವಿಶೇಷಗಳಲ್ಲಿ ಒಲವು ಪ್ರಮುಖವಾದುದು ಎಂದು ನಂಬಿರುವ ಕವಿ ಪ್ರತಿ ವಿಷಯದಲ್ಲೂ ಪ್ರೀತಿಯ ಜೊತೆ ಅನುಸಂಧಾನ ಮಾಡಿದ್ದಾರೆ. ಬಡತನದ ಕುಲುಮೆಯಲ್ಲಿ ಬೇಯುತ್ತಿರುವಾಗಲೇ ಕರುಳ ಕುಡಿಗಳು ಕಣ್ಣಮುಂದೆಯೇ ಬಾಡಿಹೋದಾಗ ಆ ದಃಖದ ಅನುಭವವನ್ನು ಎದೆಯಲ್ಲಿ ತುಂಬಿಕೊಂಡ ಬೇಂದ್ರೆ ಬಡತನ ಒಡೆತನ ಕೊನೆವರೆಗೂ ಇರುವುದಿಲ್ಲ ಎನ್ನುವ ಭರವಸೆ ನೀಡುತ್ತಾರೆ ಎಂದರು.

ರಸವೇ ಜನನ, ವಿರಸವೇ ಮರಣ, ಸಮರಸವೇ ಜೀವನ ಎಂದು ಬದುಕನ್ನು ಎದೆಗಪ್ಪಿಕೊಂಡಾಗ ಅರಳಿದ ಕಾವ್ಯ ಚೇತನ. ಬೇಂದ್ರೆಯವರ ಕಾವ್ಯದ ವಿಶೇಷವೆಂದರೆ ಬದುಕೇ ಕಾವ್ಯವಾಗುತ್ತಾ ಹೋಗುವ ಪವಾಡ ಸದೃಶ ಶಕ್ತಿ. ನೀ ಹೀಂಗ ನೋಡಬ್ಯಾಡ ನನ್ನ, ನಾನೊಂದು ನೆನೆದರೆ, ಸಖೀಗೀತ ನಾದಲೀಲೆ ಮೊದಲಾದ ಕವಿತೆಗಳಲ್ಲಿ ಅವರ ಬದುಕಿಗೆ ತೀವ್ರವಾದ ಆಘಾತವನ್ನುಂಟು ಮಾಡಿದ ಮಗನ ಸಾವು, ಸಂಸಾರದ ವಿರಸ, ತನ್ನ ಬದುಕಿನ ಕಥೆ ವ್ಯಥೆಗಳಿಂದ ಮೂಡಿದವುಗಳು. ಬದುಕಿನ ಅನನ್ಯತೆಯನ್ನು ಕಾವ್ಯವಾಗಿ ಮಾಡಿದ ಸಹಜ ಕವಿ ಎಂದು ತಿಳಿಸಿದರು.

ಸುಮಾರು 27 ಕವನ ಸಂಕಲಗಳನ್ನು ಬರೆದಿರುವ ಬೇಂದ್ರೆ ಕಾವ್ಯವನ್ನು ಅವಲೋಕಿಸಿದರೆ ಬದುಕಿನ ಆಳ ಅಗಲಗಳನ್ನು ವೈವಿಧ್ಯಮಯವಾಗಿ ಕಟ್ಟಿಕೊಟ್ಟ ಮಹಾ ಪ್ರತಿಭೆ. ಮಾನವನನ್ನು ಸದಾ ಕಾಡುವ ಹಸಿವು ಬಡತನಗಳು ಕೂಡ ಅನ್ನದೇವರು ಅನ್ನ ಬ್ರಹ್ಮ ಕವಿತೆಯ ವಸ್ತುಗಳಾದವು. ಜೀವನದ ಇಕ್ಕಟ್ಟುಗಳ ನಡುವೆಯೂ ನಿಸರ್ಗದ ಹಾಗೂ ಬದುಕಿನ ಸೌಂದರ್ಯವನ್ನುಬೊಗಸೆಬೊಗಸೆಯಾಗಿ ಸವಿದು ಅದರಂತೆ ಬದುಕಿದ ಧೀಮಂತ ಪ್ರತಿಭೆ ಬೇಂದ್ರೆಯವರದು ಎಂದು ವಿವರಿಸಿದರು.

ರಸಋಷಿ, ವರಕವಿ ಹೀಗೆ ಬಹುವಿಧವಾಗಿಓದುಗರಿಂದಗೌರವಿಸಲ್ಪಟ್ಟ ಬೇಂದ್ರೆಯವರ ಕಾವ್ಯ ಕನ್ನಡ ಭಾಷೆ ಹಾಗೂ ಸಾಹಿತ್ಯಗಳನ್ನು ಶ್ರೀಮಂತಗೊಳಿಸಿವೆ. ಕರ್ನಾಟಕದ ಏಕೀಕರಣದ ಸಂಘಟನೆಯ ಸಂದರ್ಭದಲ್ಲಿ ಇವರ ಕಾವ್ಯ ನಡೆಸಿದ ರೀತಿಯೂ ಮುಖ್ಯವಾದದ್ದು ಎಂದರು.

ಕೇಂದ್ರದ ಸಂಯೋಜಕರಾದ ಡಾ.ಲೋಕೇಶ್, ಅಧ್ಯಾಪಕರಾದ ಡಾ.ಭೀಮಾಶಂಕರ್ ಜೋಷಿ. ಡಾ.ರೂಪೇಶ್ ಹಾಗೂ ಕಾರ್ಯಕ್ರಮದ ಸಂಯೋಜಕರಾದಡಾ.ವಿಜಯಕುಮಾರ್, ಎಚ್.ಜಿ.ಡಾ.ಮಹಾಂತೇಶ್ ಪಾಟೀಲ್ ಇದ್ದರು.




---

# ಸಾಧಿಸುವ ಛಲ ಮತ್ತು ಶ್ರದ್ಧೆ ಇದ್ದರೆ, ಎಲ್ಲವೂ ಸಾಧ್ಯ: ತಿರುಪತಿ ಪಾಟೀಲ್


» **ಹೊಸದುರ್ಗ**

ಸಾಧನೆಗೆ ಅನಕ್ಷರತೆ, ಬಡತನ ಹಾಗೂ ಇನ್ನಿತರವುಗಳು ಅಡ್ಡಿ ಬರಲಾರವು. ಸಮಾಜದಲ್ಲಿ ಇವುಗಳನ್ನೆಲ್ಲ ಮೆಟ್ಟಿ ಸಾಧಿಸಿ ತೋರಿಸಿದ ಸಾಧಕರು ಬಹಳಷ್ಟು ಜನರಿದ್ದಾರೆ. ಸಾಧಿಸುವ ಛಲ ಮತ್ತು ಶ್ರದ್ಧೆ ಇದ್ದರೆ, ಜೀವನದಲ್ಲಿ ಅಸಾಧ್ಯವಾದದ್ದು ಕೂಡ ಸಾಧ್ಯವಾಗುತ್ತದೆ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ಹೇಳಿದರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಕ್ರೀಡೆ, ಸಾಂಸ್ಕೃತಿಕ ಸಂಘ, ಇಕೋ ಕ್ಲಬ್ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಚಟುವಟಿಕೆಗಳ ಸಮಾರೋಪ ಸಮಾರಂಭವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಜಾಲತಾಣಗಳು ಪ್ರಸ್ತುತ ಯುವ ಪೀಳಿಗೆಗೆ ಬಹಳಷ್ಟು ಮಾರಕವಾಗಿ ಪರಿಣಮಿಸಿವೆ. ಇವೆಲ್ಲದರವುಗಳಿಂದ ದೂರವಿದ್ದರೆ ಮಾತ್ರ, ವಿದ್ಯಾರ್ಥಿಗಳು ಸಾಧಕರಾಗಲು ಸಾಧ್ಯವಿದೆ. ವಿದ್ಯಾರ್ಥಿಗಳು ತಮ್ಮ ಸ್ಟೇಟಸ್ ಬದಲಾಯಿಸಿಕೊಳ್ಳದ ಹೊರತಾಗಿ, ಇನ್ನೊಬ್ಬರ ತೋರ್ಪಡಿಕೆಗಾಗಿ ವಾಟ್ಸಾಪ್, ಫೇಸ್ಬುಕ್, ಇನ್ಸ್ಟಾಗ್ರಾಮ್ ನಲ್ಲಿ ಸ್ಟೇಟಸ್ ಹಾಕಿದ ತಕ್ಷಣವೇ ಜೀವನ ಬದಲಾಗುವುದಿಲ್ಲ. ಓದಿನ ಮೂಲಕ ಎಲ್ಲವನ್ನು ಪಡೆದುಕೊಳ್ಳಲು ಸಾಧ್ಯವಿದೆ. ಉತ್ತಮವಾಗಿ ಓದಿನತ್ತ ಚಿತ್ತ ಹರಿಸಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಿಮ್ಮ ತಂದೆ ತಾಯಿಗಳ ಕನಸನ್ನು ನನಸಾಗಿಸಿ. ನಾವು ಇತರರ ನಡೆ-ನುಡಿಗಳನ್ನು ವಿಮರ್ಶೆ ಮಾಡುವ ಬದಲಾಗಿ, ನಮ್ಮನ್ನೆ ನಾವು ವಿಮರ್ಶೆ ಮಾಡಿಕೊಂಡಾಗ ಉತ್ತಮ ದಾರಿಯಲ್ಲಿ ಸಾಗಲು ಸಾಧ್ಯವಾಗುತ್ತದೆ. ನಾವು ಕಲಿತಂತಹ ಶಿಕ್ಷಣ ನಮಗೆ ಮಾದರಿ ಜೀವನವನ್ನು ರೂಪಿಸುವಂತಾಗಬೇಕು. ಆದಾಗ, ನಮ್ಮ ಊರಿಗೆ, ತಂದೆ ತಾಯಂದಿರಿಗೆ, ಕುಟುಂಬಸ್ಥರಿಗೆ ಗೌರವ ತಂದುಕೊಡಲು ಸಾಧ್ಯವಾಗುತ್ತದೆ. ಇದನ್ನು ಗಮನದಲ್ಲಿರಿಸಿಕೊಂಡು ವ್ಯಾಸಂಗದಲ್ಲಿ ತೊಡಗಿದರೆ, ಒಂದಲ್ಲ ಒಂದು ದಿನ ಉತ್ತಮ ವ್ಯಕ್ತಿಯಾಗಿ, ಸಾಧಕರಾಗಿ ಹೊರ ಹೊಮ್ಮುತಿರಿ ಎಂದು ಸಲಹೆ ನೀಡಿದರು.



---

**ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮುತ್ತಯ್ಯಗಳ ಶೂನ್ಯದ ಮಾರಮ್ಮ ದೇವಿ ಜಾತ್ರೆ ಆರಂಭ**

# ಜನರಕಲ್ಯಾಣಕ್ಕಾಗಿ ದೇವಿಯಲ್ಲಿ ಪ್ರಾರ್ಥನೆ: ಶಾಸಕ ಟಿ.ರಘುಮೂರ್ತಿ



» **ಚಳ್ಳಕೆರೆ**

ತಾಲ್ಲೂಕಿನ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೋಡ್ಲಾರಹಟ್ಟಿ, ಎತ್ತಿನಗೌಡರಹಟ್ಟಿ, ಬಂಗಾರದೇವರಹಟ್ಟಿ ಮುಂತಾದ ಕಡೆಗಳಲ್ಲಿ ಕಳೆದ ಹಲವಾರು ವರ್ಷಗಳಿಂದ ಆಚರಣೆ ಮಾಡುತ್ತಾ ಬಂದಿರುವ ಮುತ್ತಯ್ಯಗಳ ಶೂನ್ಯದ ಮಾರಮ್ಮದೇವಿಯ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ಆರಂಭವಾಯಿತು.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಗ್ರಾಮಕ್ಕೆ ಭೇಟಿ ನೀಡಿ ಶೂನ್ಯಮಾರಮ್ಮ ದೇವಿಯ ದರ್ಶನ ಪಡೆದು, ನಮ್ಮಲ್ಲಿರುವ ಹಳೇಯ ಸಂಪ್ರದಾಯಗಳು ಆಚರಣೆ ಮಾಡಲು ಸರಳ ಹಾಗೂ ಇಂತಹ ಆಚರಣೆಯಲ್ಲಿ ಹಲವಾರು ವಿಚಾರಗಳನ್ನು ಅರಿತುಕೊಳ್ಳುವ ಸಂದರ್ಭದ ಬರುತ್ತದೆ. ಶೂನ್ಯಮಾರಮ್ಮ ದೇವಿಯ ಕೃಪೆ ಎಲ್ಲರ ಮೇಲಿರಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಗ್ರಾಮ ಮುಖಂಡರಾದ ದೊರೆಬೈಯಣ್ಣ, ರಾಜಣ್ಣ, ಅಪ್ಪಣ್ಣ, ಬೊಮ್ಮಣ್ಣ, ಶಿವಣ್ಣ, ಗುರುಮೂರ್ತಿ, ಚಂದ್ರಣ್ಣ ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

---

# ಕನ್ನಡ ವಿರೋಧಿ ರಾಜ್ಯಪಾಲರ ವಿರುದ್ಧ ಪ್ರತಿಭಟನೆ

» **ಚಿತ್ರದುರ್ಗ**

ಕನ್ನಡ ವಿರೋಧಿ ರಾಜ್ಯಪಾಲರ ವಿರುದ್ಧ ಧಿಕ್ಕಾರಗಳನ್ನು ಕೂಗಿದ ಕರುನಾಡ ವಿಜಯಸೇನೆ ಕಾರ್ಯಕರ್ತರು ಗುರುವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಉಪ ವಿಭಾಗಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಶೇ.60 ರಷ್ಟು ಕನ್ನಡ ನಾಮಫಲಕ ಅಳವಡಿಕೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಸುಗ್ರಿವಾಜ್ಞೆ ಜಾರಿಗೊಳಿಸಿ ರಾಜ್ಯಪಾಲರ ಅಂಕಿತಕ್ಕೆ ಕಳಿಸಿತ್ತು. ಆದರೆ ರಾಜ್ಯಪಾಲರು ಸುಗ್ರಿವಾಜ್ಞೆಗೆ ಸಹಿ ಹಾಕದೆ ಹಿಂದಕ್ಕೆ ಕಳಿಸಿರುವುದು ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆ ಹಾಗೂ ಕನ್ನಡಿಗರಿಗೆ ಅವಮಾನ ಮಾಡಿದ್ದಾರೆ. ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕಕ್ಕೆ ಸದನದಲ್ಲಿ ವಿಧೇಯಕ ಮಂಡಿಸಿ ಒಪ್ಪಿಗೆ ಪಡೆದ ಪತ್ರಕ್ಕೆ ರಾಜ್ಯಪಾಲರೆ ಸಹಿ ಹಾಕದೆ ವಾಪಸ್ ಕಳಿಸಿರುವುದು ಯಾವ ನ್ಯಾಯ? ಇನ್ನು ರಾಜ್ಯದಲ್ಲಿ ಶೇ.60 ರಷ್ಟು ಕನ್ನಡ ಕಡ್ಡಾಯವಾಗುವುದು ಹೇಗೆ ಎಂದು ಪ್ರಶ್ನಿಸಿದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಇದೊಂದು ಕೇಂದ್ರ ರಾಜಕೀಯ ಕುತಂತ್ರ ಎನ್ನುವುದು ಗೊತ್ತಾಗುತ್ತದೆ. 224 ಶಾಸಕರು ಪಕ್ಷಬೇಧ ಮರೆತು ಒಗ್ಗೂಡಿ ರಾಜ್ಯಪಾಲರ ಬಳಿ ನಿಯೋಗ ಹೋಗಿ ತಿದ್ದುಪಡಿಯಾದ ವಿಧೇಯಕ ಪತ್ರಕ್ಕೆ ಸಹಿ ಹಾಕಿಸಿಕೊಂಡು ಬರಬೇಕೆಂದು ಒತ್ತಾಯಿಸಿದರು.



---

**ಪ್ರಮುಖ ಸುದ್ದಿ**

**ಕ್ರೀಡಾ, ಸಾಂಸ್ಕೃತಿಕ, ರೋವರ್ಸ್ ಹಾಗೂ ಎನ್‌ಎಸ್‌ಎಸ್ ಘಟಕಗಳ ಸಮಾರೋಪ ಸಮಾರಂಭ**

# ವೈಯಕ್ತಿಕ ಸಮಸ್ಯೆ ಕಲಿಕೆಗೆ ಅಡ್ಡಿಯಾಗಬಾರದು: ಡಿಡಿಪಿಯು

» **ಚಿತ್ರದುರ್ಗ**

ಕಲಿಕೆಗೆ ನಮ್ಮ ವೈಯಕ್ತಿಕ ಸಮಸ್ಯೆಗಳು ಎಂದಿಗೂ ಅಡ್ಡಿಯಾಗಬಾರದು ಎಂದು ಶಾಲಾ ಶಿಕ್ಷಣ ಇಲಾಖೆ ಪದವಿಪೂರ್ವ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ಹೇಳಿದರು.

ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕ್ರೀಡಾ, ಸಾಂಸ್ಕೃತಿಕ, ರೋವರ್ಸ್, ಹಾಗೂ ಎನ್.ಎಸ್.ಎಸ್. ಘಟಕಗಳ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು. ಕೇವಲ ನಾವು ಉದ್ಯೋಗಕ್ಕಾಗಿ ಮಾತ್ರ ಶಿಕ್ಷಣ ಪಡೆಯುವುದಲ್ಲ. ಉದ್ಯೋಗ ಪಡೆಯುವಂತಹದ್ದು ಅವರ ನಿಜದ ಪ್ರತಿಭೆ ಮುಖ್ಯವಾಗಿರುತ್ತದೆ. ಬೀದಿದೀಪದ ಕೆಳಗೆ ಓದಿದ ವ್ಯಕ್ತಿಗಳು ಇಂಜಿನಿಯರ್, ಸಂವಿಧಾನ ತಜ್ಞರಾಗಿದ್ದಾರೆ. ವಿಶ್ವಮಟ್ಟದಲ್ಲಿ ಗುರುತಿಸುವ ಮಹಾನ್ ವ್ಯಕ್ತಿಯಾಗಿದ್ದಾರೆ. ಎಲ್ಲರಿಗೂ ಸ್ಫೂರ್ತಿಯಾಗಿದ್ದಾರೆ. ಇದಕ್ಕೆ ಕಾರಣ ಅವರು ಪಡೆದಂತಹ ಶಿಕ್ಷಣ ಎಂದು ತಿಳಿಸಿದ ಅವರು, ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು. ಪ್ರಸಿದ್ಧ ಜನಪ್ರಿಯ ಗಾಯಕರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಡಾ.ಅಪ್ಪಗೆರೆ ತಿಮ್ಮರಾಜು ಮಾತನಾಡಿ, ವಿದ್ಯಾರ್ಥಿಗಳು ಕಷ್ಟಪಟ್ಟು ಅಧ್ಯಯನದಲ್ಲಿ ನಿರತರಾಗಬೇಕು. ಯಾವುದೇ ಕಾರಣಕ್ಕೂ ಕಾಲಹರಣ ಮಾಡಬಾರದು. ಶ್ರದ್ಧೆಯಿಂದ ಪರೀಕ್ಷೆಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದ ಅವರು, ಉಪನ್ಯಾಸಕರು ಉತ್ಸಾಹ ಕಳೆದುಕೊಳ್ಳಬಾರದು. ಉಪನ್ಯಾಸಕರು ಉತ್ಸಾಹದಿಂದ ಪಾಠಪ್ರವಚನಗಳಲ್ಲಿ ತೊಡಗಿಕೊಳ್ಳಬೇಕು ಎಂದು ಸಲಹೆ ನೀಡಿದರು. ಚಿತ್ರದುರ್ಗ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು ಸಾಂಸ್ಕೃತಿಕ ಕಾರ್ಯದರ್ಶಿ ಡಾ.ಬಿ.ಎಂ.ಗುರುನಾಥ್ ಪ್ರಾಸ್ತಾವಿಕವಾಗಿ ಮಾತನಾಡಿದರು.



ಕಾರ್ಯಕ್ರಮದಲ್ಲಿ ವಿಶ್ರಾಂತ ಪ್ರಾಧ್ಯಾಪಕ ಸಲಬೊಮ್ಮನಹಳ್ಳಿ ಸಿದ್ದೇಶ್ ಗೌಡ, ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ಎಚ್.ಬಿ.ನರಸಿಂಹಮೂರ್ತಿ, ಉಪನ್ಯಾಸಕರಾದ ಬಿ.ಕೃಷ್ಣಪ್ಪ, ಡಿ.ಶ್ರೀನಿವಾಸ್, ಎಸ್.ರಹಮಲ್ ಉಲ್ಲಾ, ಡಿ.ಕಾವ್ಯ, ಎನ್.ದೊಡ್ಡಪ್ಪ, ಎಸ್.ಎನ್. ಹೇಮಂತರಾಜು ಇದ್ದರು.

## ಫಾಸ್ಟ್ ನ್ಯೂಸ್

### ಗ್ರಾಪಂ ಯೋಜನೆಗಳ ಅನುಷ್ಠಾನಕ್ಕೆ ಜನರ ಸಹಕಾರ ಅಗತ್ಯ: ರತ್ನಮ್ಮ



» ಚಳ್ಳಕೆರೆ

ಗ್ರಾಮೀಣಭಾಗಗಳಲ್ಲಿ ಸ್ವಚ್ಚತೆಯೂ ಸೇರಿದಂತೆ ಹಲವಾರು ವಿಚಾರಗಳಲ್ಲಿ ಗ್ರಾಮಸ್ಥರನ್ನು ಜಾಗೃತಗೊಳಿಸಲಾಗುತ್ತಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬರುವ ಅನುದಾನದಲ್ಲಿ ಗ್ರಾಮ ಪಂಚಾಯಿತಿ ಆಡಳಿತ ಸಾರ್ವಜನಿಕರಿಗೆ ಉಪಯುಕ್ತವಾದ ಅಭಿವೃದ್ಧಿ ಕಾಮಗಾರಿಗಳನ್ನು ಜಾರಿಗೊಳಿಸಬೇಕಿದೆ. ಚುನಾಯಿತ ಗ್ರಾಮ ಪಂಚಾಯಿತಿ ಸದಸ್ಯರೂ ಸಹ ಅಭಿವೃದ್ಧಿ ವಿಚಾರದಲ್ಲಿ ಪಕ್ಷಬೇದ ಮಾಡದೆ ಪಂಚಾಯಿತಿ ಆಡಳಿತದೊಂದಿಗೆ ಕೈಜೋಡಿಸಬೇಕೆಂದು ಎನ್. ದೇವರಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರತ್ನಮ್ಮರಾಜಣ್ಣ ತಿಳಿಸಿದರು. ಅವರು, ಗ್ರಾಮದ ಪಂಚಾಯಿತಿ ಕಾರ್ಯಾಲಯದಲ್ಲಿ ಅನೋಡ್ ಗವರ್ನೆನ್ಸ್ ಫೌಂಡೇಷನ್ ವತಿಯಿಂದ ಹಮ್ಮಿಕೊಳ್ಳಲಾದ ಎರಡು ದಿನಗಳ ದೂರುದೃಷ್ಠಿ ಮತ್ತು ಗುರಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಇಂತಹ ಕಾರ್ಯಕ್ರಮಗಳಿಂದ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿಯನ್ನು ಸ್ವಚ್ಚತೆ ಹಾಗೂ ಇನ್ನಿತರೆ ವಿಚಾರದಲ್ಲಿ ಕೈಗೊಳ್ಳಲು ಸಾಧ್ಯವಾಗುತ್ತದೆ ಎಂದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶಶಿಕಲಾ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ದೂರದೃಷ್ಠಿ ಮತ್ತು ಗುರಿತರಬೇತಿ ಆಯೋಜಿಸುವ ಮೂಲಕ ಎಲ್ಲಾ ಚುನಾಯಿತ ಸದಸ್ಯರಲ್ಲಿ ಆತ್ಮವಿಶ್ವಾಸ ತುಂಬುವ ಕಾರ್ಯವಾಗುತ್ತದೆ. ಗ್ರಾಮ ಪಂಚಾಯಿತಿ ಅಭಿವೃದ್ಧಿಪರ ಚಿಂತನೆಗಳಿಗೆ ಸಾರ್ವಜನಿಕರು ಕೈಜೋಡಿಸಿ ಎಂದರು. ಉಪಾಧ್ಯಕ್ಷೆ ಸರಿತಾಬಾಯಿ, ಅನೋಡ್ ಗವರ್ನೆನ್ಸ್ ಫೌಂಡೇಷನ್ ಕ್ಷೇತ್ರ ಸಂಯೋಜಕ ಡಿ.ರವಿ, ಎಚ್.ಆರ್.ಮಧು, ದೀಪಾ, ಮಧುಸೂದನ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಸರ್ವರನ್ನು ಒಳಗೊಂಡ ಕೇಂದ್ರದ ಬಜೆಟ್

» ಚಿತ್ರದುರ್ಗ

ನಾಲ್ಕು ಆಧಾರ ಸ್ತಂಭಗಳ ಬಗ್ಗೆ ನಾವು ಗಮನ ಹರಿಸಿದ್ದೇವೆ. ಬಡವರು, ಮಹಿಳೆಯರು, ಯುವಜನರು ಮತ್ತು ಅನ್ನದಾತರು ದೇಶದ ಆಧಾರ ಸ್ತಂಭಗಳು. ಯಾವುದೇ ತಾರತಮ್ಯವಿಲ್ಲದೆ ಎಲ್ಲ ಅರ್ಹರಿಗೂ ಸರ್ಕಾರದ ಸೌಲಭ್ಯಗಳು ತಲುಪಬೇಕು ಎನ್ನುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಲಾಗುತ್ತಿದೆ. ರೈತರ ಆದಾಯ ಹೆಚ್ಚಿಸಿ, ಅವರಿಗೆ ಅಗತ್ಯವಾದ ನೆರವು ನೀಡಲು ಸರ್ಕಾರ ಬದ್ಧವಾಗಿದೆ. ವೈಯಕ್ತಿಕ ನೆರವು ಸೇರಿ, ಸ್ವಸಹಾಯ ಸಂಘಗಳಿಗೆ ಸರ್ಕಾರ ನೀಡುತ್ತಿರುವ ನೆರವು, ಆರ್ಥಿಕವಾಗಿ ಸಬಲರಾಗಲು ಅನುವು ಮಾಡಿಕೊಡುತ್ತಿದೆ. ರೈತರಿಗೆ ನೆರವಾಗಲು, ಅವರ ಉತ್ಪನ್ನಗಳ ಮೌಲ್ಯ ಹೆಚ್ಚಿಸಲು, ಬೆಳೆ ಸಂರಕ್ಷಿಸಲು ಅಗತ್ಯ ನೆರವು ನೀಡಲಾಗುತ್ತಿದೆ. ಅನ್ನದಾತರಿಗೆ ಈಗಾಗಲೇ ಹಲವು ಯೋಜನೆ ಜಾರಿಗೊಳಿಸಲಾಗಿದೆ. 4 ಕೋಟಿ ರೈತರಿಗೆ ಪಿಎಂ ಫಸಲ್ ಬೀಮಾ ಯೋಜನೆ ತಲುಪಿದೆ. 1269 ಇ–ಮಾರ್ಕೆಟ್‌ಗಳ ಮೂಲಕ ಕೋಟ್ಯಂತರ ರೈತರಿಗೆ ಸಹಾಯವಾಗಿದೆ.

» ಎ. ಮುರುಳಿ
ಬಿಜೆಪಿ ಜಿಲ್ಲಾಧ್ಯಕ್ಷರು, ಚಿತ್ರದುರ್ಗ

### ಅಭಿವೃದ್ಧಿಗೆ ಪೂರಕವಾದ ಕೇಂದ್ರದ ಬಜೆಟ್

» ಚಿತ್ರದುರ್ಗ

ಅಭಿವೃದ್ಧಿಗೆ ಪೂರಕವಾದ ಬಜೆಟ್ ಸರ್ವ ಕೃಷಿ–ಹವಾಮಾನ ವಲಯಗಳಲ್ಲಿ ವಿವಿಧ ಬೆಳೆಗಳ ಮೇಲೆ ನ್ಯಾನೋ ಡಿಎಪಿ (ಗೊಬ್ಬರ) ವಿಸ್ತರಿಸಲಾಗುವುದು. ಹೈನುಗಾರರನ್ನು ಬೆಂಬಲಿಸಲು ಸಮಗ್ರ ಕಾರ್ಯಕ್ರಮವನ್ನು ರೂಪಿಸಲಾಗುವುದು. 5 ಇಂಟಿಗ್ರೇಟೆಡ್ ಆಕ್ವಾ ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದು. ಸಾಗರೋತ್ಪನ್ನಗಳ ಹೆಚ್ಚಳಕ್ಕೆ ಯೋಜನೆ ರೂಪಿಸಲಾಗಿದ್ದು, ಸೀ ಫುಡ್ ಅಭಿವೃದ್ಧಿಗೆ ಒತ್ತು ನೀಡಲಾಗುವುದು.ಲಖ್‌ಪತಿ ದೀದಿಯರ ನಿರ್ಮಾಣದ ಗುರಿಯನ್ನು 2 ಕೋಟಿಯಿ0ದ 3 ಕೋಟಿಗೆ ಹೆಚ್ಚಿಸಲಾಗುವುದು. ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಸರ್ಕಾರವು 9 ರಿಂದ 14 ವರ್ಷದ ಹುಡುಗಿಯರಿಗೆ ಲಸಿಕೆಯನ್ನು ನೀಡಲಾಗುವುದು. "ಭಾರತ–ಮಧ್ಯಪ್ರಾಚ್ಯ–ಯುರೋಪ್ ಕಾರಿಡಾರ್ ಭಾರತ ಮತ್ತು ಇತರರಿಗೆ ಗೇಮ್ ಚೇಂಜರ್ ಆಗಲಿದೆ.ಉಚಿತ ಸೋಲಾರ್ ವಿದ್ಯುತ್ ನೀಡುವ ಮಹತ್ವಾಕಾಂಕ್ಷೆಯನ್ನು ಹೊಂದಲಾಗಿದ್ದು, 1 ಕೋಟಿ ಮನೆಗಳಿಗೆ 300 ಯೂನಿಟ್ ಉಚಿತ ವಿದ್ಯುತ್ ನೀಡಲು ಉದ್ದೇಶಿಸಲಾಗಿದೆ.

» ಸೂರನಹಳ್ಳಿ ವಿಜಯಣ್ಣ,ಜಿಲ್ಲಾ ಸಂಚಾಲಕರು, ಬಿಜೆಪಿ ಆರ್ಥಿಕ ಪ್ರಕೋಷ್ಠ, ಚಿತ್ರದುರ್ಗ

---

### ಮಡಿವಾಳ ಮಾಚಿದೇವ ಜಯಂತಿಯಲ್ಲಿ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ

# ವಚನ ಸಾಹಿತ್ಯ ಸಂರಕ್ಷಕ ಮಡಿವಾಳ ಮಾಚಿದೇವ

» ಚಿತ್ರದುರ್ಗ

ಹನ್ನೆರಡನೆಶತಮಾನದವಚನಸಾಹಿತ್ಯವನ್ನು ಸಂರಕ್ಷಣೆ ಮಾಡಿ, ನಾಡಿಗೆ ನೀಡಿದ ದೊಡ್ಡ ಕೀರ್ತಿ ಮಡಿವಾಳ ಮಾಚಿದೇವ ಅವರಿಗೆ ಸಲ್ಲುತ್ತದೆ ಎಂದು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಡಿವಾಳ ಮಾಚಿದೇವ ಜಯಂತಿ ಆಚರಣೆ ಸಮಾರಂಭದಲ್ಲಿ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಮಡಿವಾಳ ಮಾಚಿದೇವರ ಕಾಯಕ ಮಡಿ ಮಾಡುವಂತಹದು. ಬಸವಣ್ಣನವರ ಅನುಭವ ಮಂಟಪದಲ್ಲಿ ಮಾಚಿದೇವ ಅವರು ಬಹಳ ಪ್ರಮುಖ ಸ್ಥಾನ ಹೊಂದಿದವರು. ಮಡಿವಾಳ ಮಾಚಿದೇವರನ್ನು ವೀರಭದ್ರ ಸ್ವಾಮಿಯ ಅವತಾರಎಂದುನಾವೆಲ್ಲರೂಭಾವಿಸಿದ್ದೇವೆ. ಮಾಚಿದೇವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಅವರ ದಾರಿಯಲ್ಲಿ ನಾವು ಸಾಗೋಣ ಎಂದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಸಮಾಜ ಸಂಸ್ಕೃತಿ ವಿನಾ ಶದತ್ತ ಹೋಗುತ್ತಿರುವ ಪ್ರಸ್ತುತ ದಿನಗಳಲ್ಲಿ ಆದರ್ಶ ಮಹನೀಯರು, ದಾರ್ಶನಿಕರು, ವಚನಕಾರರ ನೆನೆಯುವುದು ಅನಿವಾರ್ಯ. ರಾಜ್ಯ ಸರ್ಕಾರ ಬಸವಣ್ಣನವರನ್ನು



ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ ಎಂದು ತಿಳಿಸಿದ ಅವರು, 12ನೇ ಶತಮಾನದಲ್ಲಿ ಬಸವಣ್ಣನವರು ಹಾಕಿಕೊಟ್ಟ ದಾರಿದೀವಿಗೆ ಇಂದಿಗೂ ಪ್ರಸ್ತುತ. ಬಸವಣ್ಣನವರ ಆಶಯದ ಮೇಲೆ ನಮ್ಮ ಸಂವಿಧಾನ ರಚನೆಯಾಗಿದೆ ಎಂದರು. ಯಾವುದೇ ಸಮಾಜ ಮುಖ್ಯವಾಹಿನಿಗೆ ಬರಲು ಶಿಕ್ಷಣ, ಸಂಘಟನೆ, ಹೋರಾಟ ಬಹಳ ಮುಖ್ಯ. ಮಡಿವಾಳ ಸಮಾಜ ಶಿಕ್ಷಣ ಪಡೆಯಬೇಕು. ಸ್ಪರ್ಧಾತ್ಮಕ ಜಗತ್ತಿಗೆ ಮಕ್ಕಳನ್ನು ತಯಾರು ಮಾಡಬೇಕು. ಮುಖ್ಯವಾಗಿ ಮಕ್ಕಳಿಗೆ ಉತ್ತಮ ಶಿಕ್ಷಣದ ಜತೆಗೆ ಸಂಸ್ಕಾರವಂತರನ್ನಾಗಿ ಮಾಡಿ ಎಂದು ಕಿವಿಮಾತು ಹೇಳಿದರು.

ಇತಿಹಾಸ ಸಂಶೋಧಕರು ಹಾಗೂ ಪ್ರಾಧ್ಯಾಪಕ ಎನ್.ಎಸ್. ಮಹಾಂತೇಶ್ ವಿಶೇಷ ಉಪನ್ಯಾಸ ನೀಡಿ, ವಚನ ಸಾಹಿತ್ಯದ ಆದ್ಯಪ್ರವರ್ತಕ ಜೇಡರ ದಾಸಿಮಯ್ಯ, ವಚನ ಸಾಹಿತ್ಯದ ಮಾರ್ಗಕಾರರಾಗಿ ಬಸವಣ್ಣ ಹಾಗೂ ವಚನ ಸಾಹಿತ್ಯದ ಸಂರಕ್ಷಕ ಮಡಿವಾಳ ಮಾಚಿದೇವ. ಹಾಗಾಗಿ ವಚನ ಸಾಹಿತ್ಯದಲ್ಲಿ ಜೇಡರ ದಾಸಿಮಯ್ಯ, ಬಸವಣ್ಣ ಹಾಗೂ ಮಡಿವಾಳ ಮಾಚಿದೇವರನ್ನು ಮರೆಯಲು ಸಾಧ್ಯವಿಲ್ಲ ಎಂದರು.

ಇಡೀ ಮಡಿವಾಳ ಸಮಾಜವನ್ನು ಮಾಚಯ್ಯನವರು ಪ್ರತಿನಿಧಿಸುತ್ತಾರೆ. ಮಾಚಯ್ಯ ವ್ಯಕ್ತಿತ್ವ ಹಾಗೂ ಮಡಿವಾಳ ಸಮಾಜದ ವ್ಯಕ್ತಿತ್ವ ಭಾಗಶಃ ಒಂದೇ ಆಗಿದೆ. ಮಾಚಯ್ಯ ಅವರು ಕೊಟ್ಟ ಕೆಲಸವನ್ನು ನಿಷ್ಠೆಯಿಂದ ಮಾಡಿದ ವ್ಯಕ್ತಿ. ಅದೇ ವ್ಯಕ್ತಿತ್ವವನ್ನೇ ಮಡಿವಾಳ ಸಮಾಜವೂ ಒಳಗೊಂಡಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ. ಮಲ್ಲಿಕಾರ್ಜುನ್, ಜಿಲ್ಲಾ ಮಡಿವಾಳರ ಸಂಘದ ಅಧ್ಯಕ್ಷ ಬಿ.ರಾಮಪ್ಪ, ಕಾರ್ಯದರ್ಶಿ ಕೆ.ಆರ್.ಮಂಜುನಾಥ್, ರಾಜ್ಯ ಮಡಿವಾಳರ ಸಂಘದ ಮಹಿಳಾ ಘಟಕ ಗೌರವಾಧ್ಯಕ್ಷೆ ಬಿ.ರಂಗಮ್ಮ, ಜಿಲ್ಲಾ ಮಡಿವಾಳ ಸಂಘದ ಮಹಿಳಾ ಘಟಕ ಅಧ್ಯಕ್ಷೆ ವೀಣಾ ಗೌರಣ್ಣ ಸೇರಿದಂತೆ ಸಮಾಜದ ಮುಖಂಡರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು. ಪಂಡರಹಳ್ಳಿ ಗಂಜಿಗಟ್ಟೆ ಆರ್.ಕೃಷ್ಣಮೂರ್ತಿ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು. ರಂಗನಿರ್ದೇಶಕ ಕೆ.ಪಿ.ಎಂ ಗಣೇಶಯ್ಯ ಕಾರ್ಯಕ್ರಮ ನಿರೂಪಿಸಿದರು.

---

# ಸಾರ್ವಜನಿಕ ಅಹವಾಲು ಸ್ವೀಕಾರಕ್ಕೆ ಚಾಲನೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು, ಅರ್ಜಿಗಳನ್ನು ಸ್ವೀಕರಿಸಲು ಶಾಶ್ವತ ಅರ್ಜಿ ಸ್ವೀಕೃತಿ ಕೇಂದ್ರ ಸ್ಥಾಪಿಸಲಾಗಿದ್ದು, ಸಾರ್ವಜನಿಕರ ಕುಂದುಕೊರತೆ ಕೋಶ ಅರ್ಜಿ ಸ್ವೀಕೃತಿ ಕೇಂದ್ರಕ್ಕೆ ಸಾರ್ವಜನಿಕರಿಂದ ಅರ್ಜಿ ಸ್ವೀಕರಿಸುವ ಮೂಲಕ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಚಾಲನೆ ನೀಡಿದರು.ಶಾಸಕ ವೀರೇಂದ್ರ ಪಪ್ಪಿ ಅವರು ಈ ಸಂದರ್ಭದಲ್ಲಿ ಮಾತನಾಡಿ, ಜನಸ್ನೇಹಿ ಆಡಳಿತ ನೀಡುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ಕುಂದುಕೊರತೆಗಳ ಅರ್ಜಿ, ಅಹವಾಲು ಸ್ವೀಕಾರ ಮಾಡುವ ಕೇಂದ್ರ ತೆರೆದಿರುವುದು ಉತ್ತಮ ನಡೆಯಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಸಾರ್ವಜನಿಕರು ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ದೂರದೂರುಗಳಿಂದ ತಮ್ಮ ಕೆಲಸ ಕಾರ್ಯಗಳಿಗೆ, ವಿವಿಧ ಬಗೆಯ ಅರ್ಜಿಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸುತ್ತಾರೆ. ಅಂತಹವರು ಇಡೀ ದಿನ ಅಧಿಕಾರಿಗಳ ಭೇಟಿಗಾಗಿ ಕಾಯುವಂತಾಗಬಾರದು, ಅವರ ಸಮಯ ವ್ಯರ್ಥವಾಗಬಾರದು ಎಂಬ ಉದ್ದೇಶದಿಂದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು, ಅರ್ಜಿಗಳನ್ನು ಸ್ವೀಕರಿಸಲು ಶಾಶ್ವತ ಕೌಂಟರ್ ಸ್ಥಾಪಿಸಲಾಗಿದ್ದು,



ಅರ್ಜಿ ಸ್ವಿಕೃತಿ ಕೇಂದ್ರದಲ್ಲಿ ಸಾರ್ವಜನಿಕರ ಅಹವಾಲು ಸಲ್ಲಿಸಬಹುದಾಗಿದೆ.ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ಪಡೆದು, ಅವರಿಗೆ ಸ್ವೀಕೃತಿ ನೀಡಲಾಗುವುದು. ಅಲ್ಲದೆ ಅಂತಹ ಅರ್ಜಿಗಳನ್ನು ಗಣಕೀಕರಣಗೊಳಿಸಿ, ಕಾಲಮಿತಿಯಲ್ಲಿ ವಿಲೇವಾರಿ ಮಾಡಲು, ಅರ್ಜಿಗಳಿಗೆ ಸ್ಪಂದಿಸಲು ವಿಶೇಷ ಆದ್ಯತೆ ನೀಡಲಾಗುವುದು ಎಂದು ತಿಳಿಸಿದ ಅವರು, ಅರ್ಜಿಗಳ ವಿಲೇವಾರಿ ಕುರಿತಂತೆ ಅಧಿಕಾರಿಗಳ ಸಭೆ ನಡೆಸಿ, ಪರಿಶೀಲನೆ ಮಾಡಲಾಗುವುದು. ಸಾರ್ವಜನಿಕರ ಸಮಸ್ಯೆಗಳಿಗೆ ಸಾಧ್ಯವಾದಷ್ಟು ಮಟ್ಟಿಗೆ ಪರಿಹಾರ ಒದಗಿಸಲು ಶ್ರಮಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಇದ್ದರು.



ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಮಡಿವಾಳ ಸಮಾಜ ಮತ್ತು ರಾಷ್ಟ್ರೀಯ ಹಬ್ಬಗಳ ಆಚರಣಾಸಮಿತಿ ಸಹಯೋಗದಲ್ಲಿ ನಡೆದ ಮಾಚಿದೇವರ ಜಯಂತಿಗೆ ತಹಶೀಲ್ದಾರ್ ರೇಹಾನ್‌ಪಾಷ ಚಾಲನೆ ನೀಡಿದರು.

---

# ಪುಣೆ ರಾಷ್ಟಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಕರ್ನಾಟಕಕ್ಕೆ ಪ್ರಶಸ್ತಿ



ಇಂಡಿಯನ್ ಯೂಥ್ ಸ್ಪೋರ್ಟ್ಸ್ ಅಸೋಸಿಯನ್ ಪುಣೆ ಇವರ ಆಶಯದಲ್ಲಿ ನಡೆದ ರಾಷ್ಟ್ರಮಟ್ಟದ ಯೂತ್ ಗೇಮ್ಸ್ 2023 24 ವೆಲ್ಫೇರ್ ಸ್ಪೋರ್ಟ್ಸ್ ಅಸೋಸಿಯೇಷನ್ ಸಭಾಂಗಣದಲ್ಲಿನಡೆದ ರಾಷ್ಟ್ರ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಸ್ವರ್ಣ ಪದಕ ಗಳಿಸುವುದರ ಮೂಲಕ ತಂಡದ ಪ್ರಶಸ್ತಿಯನ್ನು ಮೇಲುಗೈ ಸಾಧಿಸಿದೆ. 12 ರಿಂದ 14 ವರ್ಷದ ಬಾಲಕರ ವಿಭಾಗ ದಲ್ಲಿ, ಪ್ರಥಮ್ ಯು ,ಎಂ ,ಪ್ರಥಮ ಸ್ಥಾನ , ಸ್ವರ್ಣ ಪದಕ .ಕಾರ್ತಿಕ್ ,ಸಿ ಅಗಡಿ ,ನಾಲ್ಕನೇ ಸ್ಥಾನ ಕಂಚಿನ ಪದಕ. 12 ರಿಂದ 14ರ ಬಾಲಕಿ ಯರ ವಿಭಾಗದಲ್ಲಿ , ಶ್ರೇಯಾ ಶಿವಪೂಜಿ ,ಪ್ರಥಮ ಸ್ಥಾನ ಸ್ವರ್ಣ ಪದಕ .14 ರಿಂದ 16 ವರ್ಷದ ಬಾಲಕಿಯರ ವಿಭಾಗದಲ್ಲಿ, ಮೀನಾಕ್ಷಿ , ವಿ ಪ್ರಥಮ ಸ್ಥಾನ ಸ್ವರ್ಣ ಪದಕ .35 ರಿಂದ 40 ವರ್ಷದ ಮಹಿಳೆಯರ ವಿಭಾಗದಲ್ಲಿ , ಶೈಲಜಾ ಎನ್ ಪ್ರಥಮ ಸ್ಥಾನ ಸ್ವರ್ಣ ಪದಕ .40 ರಿಂದ 50 ವರ್ಷದ ಪುರುಷರ ವಿಭಾಗದಲ್ಲಿ ,ಮಯೂರ್ ಗೌಡ ಎಸ್ ,ಪಾಟೀಲ್ ಪ್ರಥಮ ಸ್ಥಾನ ಸ್ವರ್ಣ ಪದಕ. ಇವರುಗಳು ಸಮಗ್ರವಾಗಿ ಪ್ರಶಸ್ತಿಗಳನ್ನು ಪಡೆಯುವದರ ಮೂಲಕ ಕರ್ನಾಟಕದ ತಂಡದ ಪ್ರಶಸ್ತಿಯನ್ನು ಪಡೆದಿರುತ್ತಾರೆ. ಬಹುಮಾನ ಗೆದ್ದಂತ ಕ್ರೀಡಾಪಟುಗಳಿಗೆ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಶಾಸಕರುಗಳಾದ ಶಾಮನೂರು ಶಿವಶಂಕರಪ್ಪ ಬಿಪಿ ಹರೀಶ್, ಸಪ್ತಋಷಿ ಯೋಗದಾರ್ ಸ್ಪೋರ್ಟ್ಸ್ ಅಕಾಡೆಮಿ ಅಧ್ಯಕ್ಷರಾದ ಹಾಗೂ ಯೋಗ ಶಿಕ್ಷಕರಾದ ಡಾಕ್ಟರ್. ಕೆ .ಜೈಮುನಿ ಮತ್ತು ಗೌರವಾಧ್ಯಕ್ಷರಾದ , ಶಂಕರ್ ಕಟೌಕರ್ ಹಾಗೂ ಸಂಘ ಸಂಸ್ಥೆಗಳು ದಾವಣಗೆರೆ ಜಿಲ್ಲಾ ಯೋಗ ಒಕ್ಕೂಟ ಅಧ್ಯಕ್ಷರಾದ ವಾಸುದೇವ್ ರಾಯ್ಕರ್. ಜಿಲ್ಲಾ ಕ್ರೀಡಾ ಸಂಸ್ಥೆಯ ಅಧ್ಯಕ್ಷರಾದ ದಿನೇಶ್ ಕೆ .ಶೆಟ್ಟಿ ಮುಂತಾದವರು ಶುಭ ಹಾರೈಸಿದ್ದಾರೆ.

---

## ಪ್ರಮುಖ ಸುದ್ದಿ

# ರಘು, ಸವಿತಾರವರನ್ನು ಕಾಂಗ್ರೆಸ್ ಪಕ್ಷದಿಂದ ಉಚ್ಚಾಟಿಸಿ

» ಚಿತ್ರದುರ್ಗ

ಪಕ್ಷ ವಿರೋಧಿ ಚಟುವಟುಕೆಯನ್ನು ಮಾಡುತ್ತಿರುವ ರಘು ಮತ್ತು ಸವಿತಾರವರನ್ನು ಪಕ್ಷದಿಂದ ಉಚ್ಚಾಟನೆ ಮಾಡುವಂತೆ ಎನ್,ಎಸ್.ಯು.ಐ.ನ ಮಾಜಿ ಅಧ್ಯಕ್ಷ ವಿನಯ ಗೋಡೆಮನೆ ಪಕ್ಷದ ವರಿಷ್ಟರನ್ನು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಕಳೆದ ವಿಧಾನಸಬಾ ಚುನಾವಣೆಯಲ್ಲಿ ಯಾರಿಗೆ ಇವರು ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ ಎಂಬುದನ್ನು ಹೊಳಲ್ಕೆರೆಯ ಜನತೆಯೇ ಹೇಳುತ್ತಿದ್ದಾರೆ. ಪಕ್ಷದಲ್ಲಿ ಇದ್ದುಕೊಂಡು ಬೇರೆ ಪಕ್ಷದರೊಂದಿಗೆ ಶಾಮಿಲಾಗಿ ಅವರ ಪರವಾಗಿ ಕೆಲಸವನ್ನು ಮಾಡುವುದರ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ದ್ರೋಹ ಮಾಡಿದ್ದಾರೆ. ಇಂತಹರನ್ನು ಪಕ್ಷದಿಂದ ಉಚ್ಚಾಟನೆ ಮಾಡುವಂತೆ ಪಕ್ಷದ ವರಿಷ್ಠರಿಗೆ ಮನವಿ ಮತ್ತು ಇವರ ಪಕ್ಷ ದ್ರೋಹದ



ಸಾಕ್ಷಿಗಳನ್ನು ಸಹಾ ನೀಡಲಾಗಿದೆ ಆದರೆ ಪಕ್ಷದ ವರಿಷ್ಟರು ಇದುವರೆವಿಗೂ ಇವರ ಮೇಲೆ ಯಾವುದೇ ಕ್ರಮವನ್ನು ಸಹಾ ಕೈಗೊಂಡಿಲ್ಲ ಎಂದರು.

ಕಳೆದ ವಿಧಾನಸಬಾ ಚುನಾವಣೆಯಲ್ಲಿ ಜಿ.ಪಂ. ಸದಸ್ಯರಾಗಿದ್ದ ಸವಿತಾ ರಘೂ ರವರು ಬಿಜೆಪಿಯ ಜೊತೆ ಒಳ ಒಪ್ಪಂದವನ್ನು ಮಾಡಿಕೊಳ್ಳುವುದರ ಜೊತೆಗೆ ಹೊಳಲ್ಕರೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ಕೆಲಸವನ್ನು ಮಾಡದೇ ಬಿಜೆಪಿಯ ಪರವಾಗಿ ಕೆಲಸವನ್ನು ಮಾಡುವುದರ ಮೂಲಕ ನಮ್ಮ ಪಕ್ಷದ ಅಭ್ಯರ್ಥಿ ಸೋಲಿಗೆ ಕಾರಣರಾಗಿದ್ದಾರೆ. ಇಂತಹರನ್ನು ಪಕ್ಷದಿಂದ ಉಚ್ಚಾಟನೆ ಮಾಡುವುದರ ಮೂಲಕ ಪಕ್ಷದ ಗೌರವ ಘನತೆಯನ್ನು ಕಾಪಾಡಬೇಕಿದೆ ಎಂದು ಪಕ್ಷದ ವರಿಷ್ಠರನ್ನು ವಿನಯ ಗೋಡೆಮನೆ ಆಗ್ರಹಿಸಿದ್ದಾರೆ.

ಕಳೆದವಿಧಾನಸಭೇಯಚುನಾವಣೆಯಲ್ಲಿ ಮತದಾರರ ನಮ್ಮ ಪಕ್ಷಕ್ಕೆ ಬೆಂಬಲವನ್ನು ನೀಡಿ ಗೆಲ್ಲಿಸಿದ್ದಾರೆ ಇದರಿಂದ ರಾಜ್ಯದಲ್ಲಿ ಕಾಂಗ್ರೆಸ್‌ಸರ್ಕಾರಆಡಳಿತವನ್ನುನಡೆಸುತ್ತಿದೆ ಇದರ ಫಲವಾಗಿ ಪಕ್ಷದ ವರಿಷ್ಠರು ಪಕ್ಷದ ಕಾರ್ಯಕರ್ತರನ್ನು ವಿವಿಧ ನಿಗಮಗಳಿಗೆ ನೇಮಕಾತಿಯನ್ನು ಮಾಡುತ್ತಿದ್ದಾರೆ ಇದರಲ್ಲಿ ಪಕ್ಷಕ್ಕೆ ನಿಷ್ಠೆಯಿಂದ ದುಡಿದವರಿಗೆ ನೇಮಕಾತಿಯನ್ನು ಮಾಡಲಿ ಆದರೆ ಇತ್ತೀಚೆಗೆ ಬಿಡುಗಡೆಯಾದ ಪಟ್ಟಿಯಲ್ಲಿ ಪಕ್ಷಕ್ಕೆ ದ್ರೋಹವನ್ನು ಮಾಡಿದ ರಘು ಸವಿತಾರವರ ಹೆಸರು ಇದೆ ಎನ್ನುತ್ತಿದ್ದಾರೆ ಈ ರೀತಿ ಏನಾದರೂ ಇದ್ದರೆ ಅವರ ವಿರುದ್ದ ಹೋರಾಟವನ್ನು ಮಾಡಲಾಗುವುದು ಯಾವುದೇ ಕಾರಣಕ್ಕೂ ಅವರನ್ನು ನಿಗಮ ಮಂಡಳಿಗಳಿಗೆ ನೇಮಕವಾಗಲು ಬಿಡುವುದಿಲ್ಲ ಎಂದು ವಿನಯ ಆಕ್ರೋಶವನ್ನು ಹೂರಹಾಕಿದರು.

ನಮ್ಮ ಪಕ್ಷದಲ್ಲಿ ವಿವಿಧ ಘಟಕಗಳಿಗೆ ಅಧ್ಯಕ್ಷರನ್ನುನೇಮಕಮಾಡುವಾಗಶಾಸಕರ, ಸಚಿವರ ಜಿಲ್ಲಾಧ್ಯಕ್ಷರ ಅಭೀಪ್ರಾಯವನ್ನು ಕೇಳಿ ಅದನ್ನು ಕೆಪಿಸಿಸಿಗೆ ಕಳುಹಿಸುತ್ತಾರೆ ಆದರೆ ಇಲ್ಲಿ ಯಾರ ಅಭೀಪ್ರಾಯವನ್ನು ಕೇಳದೇ ಯಾರ ಮಾತನ್ನು ಪರಿಗಣಿಸದೇ ಎನ್.ಎಸ್.ಯು.ಐಗೆ ನನ್ನ ಸ್ಥಾನದಲ್ಲಿ ಬೇರೆಯವರನ್ನು ನೇಮಕ ಮಾಡಿದ್ದಾರೆ, ಇದರ ಬಗ್ಗೆಯೂ ಸಹಾ ಕೆಪಿಸಿಸಿಗೆ ದೂರನ್ನು ಸಹಾ ನೀಡಲಾಗಿದೆ, ಇಂದು ಇದರ ಬಗ್ಗೆ ಜಿಲ್ಲೆಯ ಶಾಸಕರ ಜೊತೆಯಲ್ಲಿ ರಾಜ್ಯಾಧ್ಯಕ್ಷರಾದ ಡಿ.ಕೆ,ಶಿವಕುಮಾರ್ ಚರ್ಚೆ ನಡೆಸಲಿದ್ದಾರೆ ಎಂದ ಅವರು, ಇದರ ಬಗ್ಗೆಯೂ ಸಹಾ ಹೋರಾಟವನ್ನು ಮಾಡಲಾಗುವುದು ಎಂದರು.

ಗೋಷ್ಟಿಯಲ್ಲಿ ಚೇತನ, ಕಾನೂನು ಸಲಹೆಗಾರರಾದ ಸಚ್ಚಿನ್ ಬಾಬು, ಪ್ರಧಾನ ಕಾರ್ಯದರ್ಶಿ ಕಿರಣ್ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T